ವಿಜಯಪುರ | ಸಂಪುಟ 04 | ಸಂಚಿಕೆ 133 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಜುಲೈ, 16, 2026



"ಬಿಡದಿ ಟೌನ್ ಶಿಪ್ ಯೋಜನೆ ವಿರುದ್ಧ ದೇವೇಗೌಡರು ವಿಧಾನ ಸೌಧದಲ್ಲಿ ಧರಣಿ ಕೂರುವುದಾಗಿ ಘೋಷಿಸಿದ್ದು, ಯೋಜನೆ ರದ್ದುಗೊಳಿಸುವವರೆಗೂ ನಾನೂ ಸಹ ವಿಧಾನಸೌಧದೊಳಗೆ ಧರಣಿ ಕೂರುವೆ."

■ ಬಸನಗೌಡ ಪಾಟೀಲ ಯತ್ನಾಳ ಶಾಸಕರು, ವಿಜಯಪುರ

# ಬಿಡದಿ ಟೌನ್‌ಶಿಪ್ ಯೋಜನೆಗೆ ರೈತರ ಸಮ್ಮತಿ ಕಡ್ಡಾಯ

## ರೈತರ ಜಮೀನು ಬಲವಂತವಾಗಿ ವಶಪಡಿಸಿಕೊಳ್ಳುವುದಿಲ್ಲ । ಯೋಜನೆಯ ಸಾಧಕ-ಬಾಧಕಗಳ ಪರಿಶೀಲನೆಗೆ ಸಮಿತಿ ರಚನೆ । ಸಿಎಂ ಡಿ.ಕೆ. ಶಿವಕುಮಾರ್ ಸ್ಪಷ್ಟನೆ

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ಪ್ರಸ್ತಾವಿತ ಬಿಡದಿ ಟೌನ್‌ಶಿಪ್ ಯೋಜನೆಗಾಗಿ ಯಾವುದೇ ಒಬ್ಬ ರೈತನ ಜಮೀನನ್ನೂ ಸಹ ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳುವುದಿಲ್ಲ. ಜಮೀನು ನೀಡಲು ಇಷ್ಟವಿಲ್ಲದ ರೈತರು ಮುಕ್ತವಾಗಿ ಕೃಷಿ ಚಟುವಟಿಕೆಗಳನ್ನು ಮುಂದುವರಿಸಬಹುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭರವಸೆ ನೀಡಿದ್ದಾರೆ.

ಬುಧವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಯೋಜನೆಯ ಇತಿಹಾಸದ ಅಧಿಕೃತ ದಾಖಲೆಗಳನ್ನು ಪ್ರಸ್ತುತಪಡಿಸಿದರು. ಸರ್ಕಾರ ಯಾರೊಬ್ಬರನ್ನೂ ಭೂಮಿ ನೀಡುವಂತೆ ಒತ್ತಾಯಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಯಾರಿಗೆ ಭೂಮಿ ನೀಡಲು ಇಷ್ಟವಿಲ್ಲವೋ ಅವರು ಕೃಷಿ ಮಾಡಿಕೊಂಡಿರಬಹುದು. ಯಾರು ಸ್ವಇಚ್ಛೆಯಿಂದ ಭೂಮಿ ನೀಡಲು ಸಿದ್ಧರಿದ್ದಾರೋ, ಅವರು ಸರ್ಕಾರಕ್ಕೆ ಒಪ್ಪಿಸಿ ಪರಿಹಾರ ಪಡೆದುಕೊಳ್ಳಬಹುದು. ಆದರೆ ಒಂದು ಗುಂಟೆ ಜಮೀನನ್ನೂ ಬಲವಂತವಾಗಿ ಕಿತ್ತುಕೊಳ್ಳುವುದಿಲ್ಲ," ಎಂದು ಹೇಳಿದರು.

ಸಾಧಕ–ಬಾಧಕಗಳ ಪರಿಶೀಲನೆಗೆ ಸಮಿತಿ ರಚನೆ : ಯೋಜನೆಯ ಅನುಷ್ಠಾನದ ಕುರಿತು ಪರಿಶೀಲಿಸಲು ಮತ್ತು ರೈತರ ಅಭಿಪ್ರಾಯ ಹಾಗೂ ಆತಂಕಗಳನ್ನು ಆಲಿಸಲು ಸಮಿತಿಯೊಂದನ್ನು ರಚಿಸಲಾಗುವುದು ಎಂದು ತಿಳಿಸಿದ ಅವರು, ಭೂಮಿ ನೀಡದ ರೈತರ ಜಮೀನಿನ ಸದ್ಯದ ಸ್ಥಿತಿಗತಿಯನ್ನು (ಐಚಿಟಿಜ ಖಣಚಿ–ಣಣ) ಬದಲಾಯಿಸುವುದಿಲ್ಲ ಎಂದು ಆಶ್ವಾಸನೆ ನೀಡಿದರು.

ಸಮಿತಿಯ ವರದಿ ಬಂದ ನಂತರ ಮುಂದಿನ ನಿರ್ಧಾರವನ್ನು ಸಂಪುಟ ಸಭೆಯ ಮುಂದೆ ಮಂಡಿಸಲಾಗುವುದು ಎಂದರು.

ಬಿಡದಿಯಲ್ಲಿ ಜಮೀನು ಸರ್ವೆ ಸಂದರ್ಭದಲ್ಲಿ ನಡೆದ ಹಿಂಸಾಚಾರಕ್ಕೆ ತೀವ್ರ ಬೇಸರ ವ್ಯಕ್ತಪಡಿಸಿದ ಅವರು, ರಾಜಕೀಯ ಪ್ರೇರಣೆಯಿಂದ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಲಾಗಿದೆ ಮತ್ತು ಕೆಲವು ವ್ಯಕ್ತಿಗಳು ರೈತರನ್ನು ಹಾದಿ ತಪ್ಪಿಸುತ್ತಿದ್ದಾರೆ ಎಂದು ಹೇಳಿದರು.

ಈ ಯೋಜನಾ ಪ್ರದೇಶವನ್ನು 'ರೆಡ್ ಝೋನ್' ಎಂದು ಘೋಷಿಸಿ ಗೆಜೆಟ್ ನೋಟಿಫಿಕೇಶನ್ ಹೊರಡಿಸಲಾಗಿತ್ತು. ಬಿಡಿಎ ಅನುಮೋದನೆ ಇಲ್ಲದೆ ಯಾವುದೇ ಅಭಿವೃದ್ಧಿ ಕಾರ್ಯ ಮಾಡುವಂತಿರಲಿಲ್ಲ. 2007ರಲ್ಲಿ ಮಾರಂಡಹಳ್ಳಿ, ಒಡೆಯರಹಳ್ಳಿ ಸೇರಿದಂತೆ ಮತ್ತಷ್ಟು ಗ್ರಾಮಗಳನ್ನು ಇದಕ್ಕೆ ಸೇರಿಸಲಾಗಿತ್ತು.

ಆಐಈ ಕಂಪನಿಗೆ ಅನುಮತಿ: ಹಿಂದಿನ ಸರ್ಕಾರವೇ ಗ್ರಾಮಠಾಣಾ ಸೇರಿದಂತೆ ಆಸ್ತಿಗಳ ಪರಿಹಾರ ಗುರುತಿಸಿ, ಖಾಸಗಿ ಡೆವಲಪರ್ ಡಿಎಲ್‌ಎಫ್ ಕಂಪನಿಯಿಂದ 400 ಕೋಟಿ ರೂ. ಭದ್ರತಾ ಠೇವಣಿ ಪಡೆದು ಯೋಜನೆಗೆ ಪಾಲ್ಗೊಳ್ಳಲು ಅನುಮತಿ ನೀಡಿತ್ತು ಎಂದು ಹೇಳಿದರು.

ಮುಂದುವರಿದು, 2010 ರಲ್ಲಿದ್ದ ಸರ್ಕಾರವೂ ಇದೇ ಯೋಜನೆಯನ್ನು ಮುಂದುವರಿಸಿ ಪಿಪಿಪಿ ಮಾದರಿಯಲ್ಲಿ ಜಾಗತಿಕ ಟೆಂಡರ್ ಆಹ್ವಾನಿಸಿತ್ತು ಎಂದು ನೆನಪಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಶಾಸಕ ಬಾಲಕೃಷ್ಣ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಜೆ.ಸಿ. ಚಂದ್ರಶೇಖರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

### ಇದು ನನ್ನ ಕನಸಿನ ಯೋಜನೆಯಲ್ಲ!



ಬಿಡದಿ ಟೌನ್‌ಶಿಪ್ ಯೋಜನೆ ನನ್ನ ಕನಸಿನ ಯೋಜನೆಯಲ್ಲ. ನಾನು ಎಂದಿಗೂ ಇದರ ಮಾಲೀಕತ್ವ ಅಥವಾ ಶ್ರೇಯಸ್ಸನ್ನು ಪಡೆದಿಲ್ಲ, ಕನಿಷ್ಠ ಇದಕ್ಕೆ ಶಂಕುಸ್ಥಾಪನೆಯನ್ನೂ ಮಾಡಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ನಾನು ಕೇವಲ ಹಿಂದಿನ ಸರ್ಕಾರಗಳು ಆರಂಭಿಸಿದ್ದ ಯೋಜನೆಯನ್ನು ಮುಂದುವರಿಸುತ್ತಿದ್ದೇನೆ. ಅಷ್ಟಕ್ಕೂ ನಾನು ಕೂಡ ಒಬ್ಬ ರೈತನ ಮಗ, ರೈತರ ಕಷ್ಟ ನನಗೆ ಗೊತ್ತು. ರೈತರ ಹಿತಾಸಕ್ತಿಗೆ ಧಕ್ಕೆ ತರುವ ಯಾವುದೇ ಕೆಲಸವನ್ನು ನಾನು ಮಾಡುವುದಿಲ್ಲ," ಎಂದು ಭಾವುಕರಾಗಿ ನುಡಿದರು.

# ಅಪಾರ್ಟ್ ಮೆಂಟ್ ನಿವಾಸಿಗಳ ಹಕ್ಕು ರಕ್ಷಣೆಗೆ ಬದ್ಧ



■ ಉದಯರಶ್ಮಿ ದಿನಪತ್ರಿಕೆ

### ಆಗಸ್ಟ್ 6 ರವರೆಗೆ ಸಲಹೆ ಸೂಚನೆಗಳನ್ನು ನೀಡಲು ಅವಕಾಶ । ಸಿಎಂ ಡಿ ಕೆ ಶಿವಕುಮಾರ್ ಭರವಸೆ

ಬೆಂಗಳೂರು: ಅಪಾರ್ಟ್ ಮೆಂಟ್ ನಿವಾಸಿಗಳ ಹಕ್ಕು ರಕ್ಷಣೆಗೆ ಸರ್ಕಾರ ಬದ್ಧವಾಗಿದೆ. ಸಮಸ್ಯೆಗಳ ಮುಕ್ತಿಗೆ ನಮ್ಮ ಸರ್ಕಾರ ಹೆಜ್ಜೆ ಇಟ್ಟಿದೆ. ಏಕಪಕ್ಷೀಯ ನಿರ್ಧಾರ ನಮ್ಮ ಧೋರಣೆಯಲ್ಲ. ಆಸ್ತಿಯನ್ನು ನೀವು ಕೊಂಡುಕೊಂಡ ಮೇಲೆ ನೀವೇ ಅದರ ಮಾಲೀಕರು. ಈ ವಿಚಾರದಲ್ಲಿ ಅನುಮಾನವಿಲ್ಲ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಕರ್ನಾಟಕ ಅಪಾರ್ಟ್ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) 2026 ಕುರಿತು ಅಪಾರ್ಟ್ ಮೆಂಟ್ ಸಂಘಗಳ ಪ್ರತಿನಿಧಿಗಳೊಂದಿಗೆ ನೆಹರು ತಾರಾಲಯ ಸಭಾಂಗಣದಲ್ಲಿ ಬುಧವಾರ ನಡೆದ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಆಗಸ್ಟ್,6 ರವರೆಗೆ ಸಾರ್ವಜನಿಕರು ತಮ್ಮ ಅಭಿಪ್ರಾಯಗಳನ್ನು, ಸಲಹೆಗಳನ್ನು ಬೆಂಗಳೂರು ನಗರಾಭಿವೃದ್ಧಿ ಸಚಿವರು ಹಾಗೂ ನನಗೆ ಬರೆಯಬಹುದು. ಇದನ್ನು ವಿಧಾನಸಭೆಯಲ್ಲಿ ಮಂಡಿಸಲಾಗುವುದು. ಆಸ್ತಿ ಕೊಂಡವರಿಗೆ ಅನುಕೂಲವಾಗುವಂತೆ ಈ ವಿಧೇಯಕವನ್ನು ಜಾರಿಗೆ ತರಲಾಗುತ್ತಿದೆ. ಎಲ್ಲಾ ಪಕ್ಷದ ನಾಯಕರಿಗೂ ತಮ್ಮ ಅಭಿಪ್ರಾಯಗಳನ್ನು ತಿಳಿಸಲು ಅವಕಾಶ ನೀಡಲಾಗಿದೆ. ಶಾಸಕರೂ ತಮ್ಮ ಅಭಿಪ್ರಾಯಗಳನ್ನು ತಿಳಿಸಬಹುದು. ಏಕಪಕ್ಷೀಯವಾಗಿ ನಾನು ನಿರ್ಧಾರ ಮಾಡಲು ಸಾಧ್ಯವಿಲ್ಲ ಎಂದರು. ನಿಮ್ಮ ಯಾವುದೇ ಸಲಹೆ ಸೂಚನೆಗಳಿದ್ದರೂ ನನಗೆ ಹಾಗೂ ಕೃಷ್ಣ ಬೈರೇಗೌಡರಿಗೆ ನೀಡಿ. ನನ್ನ ಮೊಬೈಲ್ ಸಂಖ್ಯೆ ನೀಡಲು ತಿಳಿಸುತ್ತೇನೆ. ಅದಕ್ಕೆ ನಿಮ್ಮ ಸಲಹೆಗಳನ್ನು ಕಳುಹಿಸಬಹುದು. ಜೊತೆಗೆ ಡೆವಲಪರ್ ಗಳನ್ನು ಕರೆಸಿ ಅವರ ಜೊತೆಯೂ ಮಾತನಾಡಿ ಕಾನೂನು ಏನಿದೆ ಎಂದು ಮನವರಿಕೆ ಮಾಡಲಾಗುವುದು" ಎಂದರು.

ಬೆಂಗಳೂರಿನಲ್ಲಿ 40 ಲಕ್ಷ ಆಸ್ತಿಗಳಿದ್ದು ಈಗಾಗಲೇ 26 ಲಕ್ಷ ಆಸ್ತಿಗಳಿಗೆ ಖಾತೆ ನೀಡಲಾಗಿದೆ. ಒಂದಷ್ಟು ಜನ ಕಾನೂನುಗಳನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಮೂರು ಮಹಡಿಗಳಿಗೆ ಅನುಮತಿ ಪಡೆದು ಐದು ಮಹಡಿಗಳನ್ನು ನಿರ್ಮಾಣ ಮಾಡಿದ್ದಾರೆ. ಹೆಚ್ಚಿನವರು ಪ್ರಾಮಾಣಿಕರಿದ್ದು ಅವರು ಕಾನೂನಿನ ಅಡಿ ಕೆಲಸ ಮಾಡಿದ್ದಾರೆ ಎಂದರು.

# ಮಾದಕ ದ್ರವ್ಯ ಮುಕ್ತ ಸಮಾಜಕ್ಕೆ ಆರಕ್ಷಕರ ಸಂಕಲ್ಪ

## ವಿಜಯಪುರ ಜಿಲ್ಲೆಯಲ್ಲಿ ಕಳೆದ ಒಂದೂವರೆ ವರ್ಷದಲ್ಲಿ 'ಕೋಟಿ' ಮೌಲ್ಯದ ಮಾದಕ ದ್ರವ್ಯ ಜಪ್ತಿ । ಬೆಳಗಾವಿ ಉತ್ತರ ವಲಯದ ಪೊಲೀಸ್ ಮಹಾ ನಿರೀಕ್ಷಕ ಸಂದೀಪ ಪಾಟೀಲ ಮಾಹಿತಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮಾದಕ ದ್ರವ್ಯ ಮುಕ್ತ ಸಮಾಜಕ್ಕೆ ಆರಕ್ಷಕರು ಸಂಕಲ್ಪ ಮಾಡಿದ್ದು, ವಿಜಯಪುರ ಜಿಲ್ಲೆಯಲ್ಲಿ ಮಾದಕ ದ್ರವ್ಯ ವಸ್ತುಗಳ ಮಾರಾಟ ಜಾಲಗಳನ್ನು ಮಟ್ಟ ಹಾಕಲು ಶ್ರಮಿಸಲಾಗುತ್ತಿದ್ದು, ಕಳೆದ ವರ್ಷ ಹಾಗೂ ಪ್ರಸಕ್ತ ವರ್ಷದ ಜೂನ್ ಮಾಸಾಂತ್ಯದವರೆಗೆ 98,76,720 ರೂ. ಮೌಲ್ಯದ ಮಾದಕ ದ್ರವ್ಯಗಳನ್ನು ಜಪ್ತು ಮಾಡಿ 73 ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಬೆಳಗಾವಿ ವಿಭಾಗದಲ್ಲಿ ಡ್ರಗ್ಸ್ ಭೇದಿಸುವ ಪ್ರಕರಣದಲ್ಲಿ ವಿಜಯಪುರ ಜಿಲ್ಲೆ ಪ್ರಥಮ ಸ್ಥಾನದಲ್ಲಿದೆ ಎಂದು ಬೆಳಗಾವಿ ಉತ್ತರ ವಲಯದ ಪೊಲೀಸ್ ಮಹಾ ನಿರೀಕ್ಷಕ ಸಂದೀಪ ಪಾಟೀಲ ಮಾಹಿತಿ ನೀಡಿದರು.

ವಿಜಯಪುರದಲ್ಲಿಡ್ರಗ್‌ಫ್ರೀಕರ್ನಾಟಕ ಅಂಗವಾಗಿ ಕೈಗೊಳ್ಳಲಾಗುತ್ತಿರುವ ಅಭಿಯಾನ ಹಾಗೂ ಕಾರ್ಯಚಟುವಟಿಕೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಿವರಣೆ ನೀಡಿದ ಅವರು, ಮಾದಕ ದ್ರವ್ಯ ಮಾರಾಟ ಜಾಲವನ್ನು ಬೇಧಿಸಲು ಪ್ರಯತ್ನಿಸಲಾಗುತ್ತಿದೆ, ಹೀಗಾಗಿ ಕಳೆದ ವರ್ಷ ನಡೆಸಿದ ಕಾರ್ಯಾಚರಣೆಯ ಫಲವಾಗಿ 73 ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ, ಕಳೆದ 2025 ನೇ ವರ್ಷದಲ್ಲಿ 74,73,140 ರೂ. ಮೌಲ್ಯದ ಮಾದಕ ದ್ರವ್ಯವನ್ನು ಜಪ್ತು ಮಾಡಿ 36 ಜನರ ಮೇಲೆ ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು. 23 ಜನ ಗ್ರಾಹಕರ ವಿರುದ್ಧವೂ ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು. ಅದೇ ತೆರನಾಗಿ ಪ್ರಸಕ್ತ ವರ್ಷದ ಜೂನ್ ಮಾಸಾಂತ್ಯದವರೆಗೆ 24,03,580 ರೂ. ಮೌಲ್ಯದ ಮಾದಕ ದ್ರವ್ಯ ಜಪ್ತು ಮಾಡಿಕೊಂಡು, 37 ಜನ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಂಡು, 17 ಜನ ಗ್ರಾಹಕರ ವಿರುದ್ಧವೂ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಕಳೆದ ಒಂದೂವರೆ ವರ್ಷದ ಅವಧಿಯಲ್ಲಿ 98,76,720 ರೂ. ಮೌಲ್ಯದ ಮಾದಕ ದ್ರವ್ಯ ಜಪ್ತು ಮಾಡಿ ನಾಶಪಡಿಸಲಾಗಿದೆ ಎಂದು ವಿವರಣೆ ನೀಡಿದರು.

ಮಾದಕ ವಸ್ತುಗಳ ಬಗ್ಗೆ ಈಗಾಗಲೇ ಗಂಭೀರವಾಗಿ ಪರಿಗಣಿಸಿ ಪೊಲೀಸ್ ಇಲಾಖೆಯಿಂದ ಸಾಕಷ್ಟು ಕ್ರಮಗಳಾಗಿದ್ದು ಸಾಕಷ್ಟು ಪ್ರಕರಣ ದಾಖಲು ಮಾಡಲಾಗಿದೆ, ಡ್ರಗ್ ಪೆಡ್ಲರ್‌ಗಳ ಮೇಲೆ ದಾಳಿ ನಡೆಸಲಾಗುತ್ತಿದೆ, ಗಾಂಜಾ ಬೆಳೆಯುವವರ ಮೇಲೆ ನಿಗಾ ಇರಿಸಿ ಅವರನ್ನು ವಶಪಡಿಸಿಕೊಳ್ಳಲಾಗುತ್ತಿದೆ ಎಂದರು.

ಈಗಾಗಲೇ ಅನೇಕ ಶಾಲೆ ಕಾಲೇಜುಗಳು ಸೇರಿದಂತೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಸಂಘಟಿಸಲಾಗುತ್ತಿದ್ದು ಆಪರೇಷನ್ ರೈಸ್ ಹಾಗೂ ಮಾದಕ ವಸ್ತುಗಳು ಬೇಡ ಎನ್ನುವ ಸಂದೇಶದ ತಾತ್ಪರ್ಯಯುಳ್ಳ 'ಬೇಡ ಬ್ರೋ' ಎಂಬ ಅಭಿಯಾನ ವಿಜಯಪುರ ಸೇರಿದಂತೆ ಎಲ್ಲ ಕಡೆ ನಡೆಸಲಾಗುತ್ತಿದೆ,

ಆಪರೇಷನ್ ರೈಸ್ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಅವರೇ ಮಾದಕ ವಸ್ತುಗಳ ನಿರಾಕರಿಸುವುದು ಸೇರಿದಂತೆ ಹಲವು ಕಾರ್ಯಕ್ರಮವಾಡಲಾಗುತ್ತಿದೆ. ಅಲ್ಲದೇ ಈ ಕಾರ್ಯಕ್ರಮಕ್ಕೆ ಸಂಘ ಸಂಸ್ಥೆಗಳು, ಶಾಲಾ ಕಾಲೇಜುಗಳ ಸಹಯೋಗದಲ್ಲಿ ನಡೆಸಲಾಗುತ್ತಿದೆ. ಬೇಡ ಬ್ರೋ ಕಾರ್ಯಕ್ರಮದಲ್ಲಿ ಸಾಮಾಜಿಕ ಜಾಲತಾಣದಲ್ಲಿ ಜನರಿಗೆ ಅರ್ಥವಾಗುವ ಹಾಗೆ ಜನಸ್ನೇಹಿ ಯುವ ಸ್ನೇಹಿ ಸಂದೇಶ ನೀಡಿ ಮಾದಕ ದ್ರವ್ಯಗಳಿಂದ ದೂರವಿರುವ ಸಂದೇಶ ಸಾರುವ ಕಾರ್ಯ ಮಾಡಲಾಗುತ್ತಿದೆ ಎಂದು ಸಂದೀಪ ಪಾಟೀಲ ವಿವರಿಸಿದರು.

# ಎಲ್ಲ ಕಾಲುವೆಗಳಿಗೆ ತಕ್ಷಣ ನೀರು ಹರಿಸಲು ಕರವೇ ಆಗ್ರಹ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ತಾಲೂಕಿನ ರೈತರ ಜಮೀನುಗಳಿಗೆ ನೀರಾವರಿ ಹಾಗೂ ಜನ– ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವ ಹಿನ್ನೆಲೆಯಲ್ಲಿ ಮುಳವಾಡ ಏತ ನೀರಾವರಿ ಯೋಜನೆಗೆ ಸಂಬಂಧಿಸಿದ ಎಲ್ಲಾ ಕಾಲುವೆಗಳಿಗೆ ತಕ್ಷಣ ನೀರು ಹರಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕದ ಅಧ್ಯಕ್ಷ ರವಿ ಗೊಳಸಂಗಿ ನೇತೃತ್ವದಲ್ಲಿ ಕಾರ್ಯಕರ್ತರು ಮತ್ತು ರೈತರು ಆಗ್ರಹಿಸಿದರು.

ಬುಧವಾರ ತಹಶೀಲ್ದಾರ ಸಂತೋಷ ಮ್ಯಾಗೇರಿ ಅವರ ಮುಖಾಂತರ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರಸಕ್ತ ಮುಂಗಾರು ಮಳೆ ಕೊರತೆಯಿಂದ ತಾಲ್ಲೂಕಿನ ಅನೇಕ ಗ್ರಾಮಗಳಲ್ಲಿ ಬೆಳೆಗಳು ನೀರಿನ ಅಭಾವದಿಂದ ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಜೊತೆಗೆ ಜನ– ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯೂ ಉಲ್ಬಣಗೊಂಡಿದೆ. ಈ ಹಿನ್ನೆಲೆ ರೈತರ ಹಿತದೃಷ್ಟಿಯಿಂದ ಮುಳವಾಡ ಏತ ನೀರಾವರಿ ಯೋಜನೆಯ ಎಲ್ಲಾ ಕಾಲುವೆಗಳಿಗೆ ಕೂಡಲೇ ನೀರು ಹರಿಸಿ ಬೆಳೆಗಳನ್ನು ಉಳಿಸಬೇಕು ಹಾಗೂ ಜಾನುವಾರುಗಳಿಗೆ ಮೇವಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಪ್ರಸ್ತುತ ಆಲಮಟ್ಟಿ ಜಲಾಶಯದಲ್ಲಿ ಸುಮಾರು 95 ಟಿಎಂಸಿ ನೀರು ಸಂಗ್ರಹವಿದ್ದು, ಸಮರ್ಪಕವಾಗಿ ಕಾಲುವೆಗಳಿಗೆ ನೀರು ಹರಿಸಿದರೆ ರೈತರು ಹಾಗೂ ಗ್ರಾಮೀಣ ಜನತೆಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

ಒಂದು ವೇಳೆ ಶೀಘ್ರ ಕ್ರಮ ಕೈಗೊಳ್ಳದಿದ್ದರೆ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕದ ನೇತೃತ್ವದಲ್ಲಿ ರೈತರೊಂದಿಗೆ ಸೇರಿ ಕೊಲ್ಹಾರ ತಹಶೀಲ್ದಾರರ ಕಚೇರಿ ಎದುರು ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಸಲೀಂ ಮಮದಾಪೂರ, ಅಶೋಕ ಗಣಿ, ಚೆನ್ನಪ್ಪ ವಾಲಿಕಾರ, ಸುರೇಶ ಸಾರವಾಡ, ಶ್ರೀಧರ ಬೆಳಗಾರ, ಧರೆಪ್ಪ ನ್ಯಾಮಗೊಂಡ ಸೇರಿದಂತೆ ಕರವೇ ಕಾರ್ಯಕರ್ತರು ಹಾಗೂ ರೈತರು ಉಪಸ್ಥಿತರಿದ್ದರು.

# ಆಲಮಟ್ಟಿ ಶಾಸ್ತ್ರೀ ಸಾಗರದಿಂದ ಕೆರೆಗಳಿಗೆ ನೀರು ಹರಿಸಿ

## ಸಿ.ಎಂ. ಡಿ.ಕೆ. ಶಿವಕುಮಾರಗೆ ಮಾಜಿ ಸಚಿವ ಶಿವಾನಂದ ಪಾಟೀಲ ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಜನ ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಲಾಲಬಹದ್ದೂರ ಶಾಸ್ತ್ರಿ ಸಾಗರ (ಆಲಮಟ್ಟಿ) ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಲು ಆದೇಶ ಮಾಡುವಂತೆ ಬಸವನಬಾಗೇವಾಡಿ ಶಾಸಕರಾದ ಮಾಜಿ ಸಚಿವ ಶಿವಾನಂದ ಪಾಟೀಲ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಮನವಿ ಮಾಡಿದ್ದಾರೆ.

ಈ ಕುರಿತು ಮುಖ್ಯಮಂತ್ರಿಗಳಿಗೆ ಪತ್ರ ಬರೆದಿರುವ ಶಿವಾನಂದ ಪಾಟೀಲ ಅವರು, ಆಲಮಟ್ಟಿ ಜಲಾಶಯ ಮುಂಗಾರಿನಲ್ಲಿ ಭರ್ತಿಯಾಗದಿದ್ದರೂ ಹಿಂಗಾರಿನಲ್ಲಿ ಭರ್ತಿಯಾಗುವ ವಿಶ್ವಾಸ ಇದೆ. ಜಲಾಶಯ ಹಿಂಗಾರಿನಲ್ಲೂ ಭರ್ತಿಯಾದ ಹಲವು ನಿದರ್ಶನಗಳಿವೆ. ಹೀಗಾಗಿ ಈಗಲೇ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಿದರೆ ಭವಿಷ್ಯದ ದಿನಗಳಲ್ಲಿ ನೀರಿನ ಕೊರತೆಯಾಗಬಹುದು ಎಂದು ಆತಂಕ ಪಡುವ ಅಗತ್ಯವಿಲ್ಲ ಎಂದು ಅವರು ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರದಲ್ಲಿ ವಿವರಿಸಿದ್ದಾರೆ.

ಜಲಾಶಯದಲ್ಲಿ ಈಗ ಬಳಸಬಹುದಾದ ನೀರಿನ ಪ್ರಮಾಣ 70 ಟಿಎಂಸಿ ಅಡಿ ನೀರಿದೆ. ಜಲಾಶಯ ಭರ್ತಿಯಾಗಲು 35 ಟಿಎಂಸಿ ಅಡಿ ಅಗತ್ಯವಿದೆ. ಮುಂಗಾರು ಇನ್ನೂ ಮುಗಿದಿಲ್ಲ. ಹೀಗಾಗಿ ಜಲಾಶಯ ಭರ್ತಿಯಾಗುವ ವಿಶ್ವಾಸ ಇದೆ ಎಂದು ವಿವರಿಸಿದ್ದಾರೆ.

ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಯ ಹಲವೆಡೆ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ನೀರಾವರಿ ಸಲಹಾ ಸಮಿತಿ ಸಭೆ ಕರೆದು ಚರ್ಚೆ ಮಾಡಿದ ನಂತರ ನೀರು ಹರಿಸುವ ನಿರ್ಧಾರ ಕೈಗೊಳ್ಳುವವತನಕ ಕಾದು ಕುಳಿತುಕೊಳ್ಳುವ ಸಮಯ ಇದಲ್ಲ. ಪರಿಸ್ಥಿತಿಯ ಗಂಭೀರತೆ ಹಿನ್ನೆಲೆಯಲ್ಲಿ ತಕ್ಷಣ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಅವರು ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದಾರೆ.

ಪ್ರತಿ ವರ್ಷ ಜಲಾಶಯ ಭರ್ತಿಯಾದ ನಂತರ ನೂರರಿಂದ ಎರಡು ನೂರು ಟಿಎಂಸಿ ನೀರು ವ್ಯರ್ಥವಾಗಿ ಹರಿದು ಹೋಗುತ್ತಿದೆ. ಅಧಿಕಾರಿಗಳು ಜಲಾಶಯಕ್ಕೆ ನಿರೀಕ್ಷಿತ ಪ್ರಮಾಣದಲ್ಲಿ ನೀರು ಇನ್ನೂ ಹರಿದು ಬಂದಿಲ್ಲ ಎಂದು ಕಾಲುವೆಗಳಿಗೆ ನೀರು ಹರಿಸಲು ಹಿಂದೇಟು ಹಾಕುತ್ತಿದ್ದಾರೆ ಎಂದು ವಿವರಿಸಿದ್ದಾರೆ.

ಇನ್ನೂ 10–15 ಟಿಎಂಸಿ ಅಡಿ ನೀರು ಜಲಾಶಯದಲ್ಲಿ ಸಂಗ್ರಹವಾದ ನಂತರ ಕಾಲುವೆಗಳಿಗೆ ನೀರು ಬಿಡಬಹುದು ಎಂಬುದು ಅಧಿಕಾರಿಗಳ ನಿಲುವಾಗಿದೆ. ಆದರೆ ಈ ವಿಳಂಬ ನೀತಿಯಿಂದ ಸರ್ಕಾರ ಜನರ ಆಕ್ರೋಶಕ್ಕೆ ತುತ್ತಾಗಬೇಕಾಗುತ್ತದೆ ಎಂದು ಶಾಸಕರು ಪತ್ರದಲ್ಲಿ ವಿವರಿಸಿದ್ದಾರೆ.

ತಾವು ಮುಖ್ಯಮಂತ್ರಿಗಳಾಗಿ ಅಧಿಕಾರ ವಹಿಸಿಕೊಂಡ ನಂತರ ಹಲವು ಜನಪರ ವಿಚಾರಗಳಲ್ಲಿ ತುರ್ತು ಕ್ರಮಗಳನ್ನು ಕೈಗೊಂಡು ರಾಜ್ಯದ ಜನರ ಮೆಚ್ಚುಗೆಗೆ ಪಾತ್ರರಾಗಿದ್ದೀರಿ. ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಯ ಜನ ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆ ವಿಚಾರದಲ್ಲೂ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಕೋರಿದ್ದಾರೆ.

ಆಲಮಟ್ಟಿ ಜಲಾಶಯ ಹಿಂಗಾರಿನಲ್ಲಾದರೂ ಭರ್ತಿಯಾಗಲಿದ್ದು, ಯಾವುದೇ ಅನುಮಾನದ ಅಗತ್ಯವಿಲ್ಲ. ಹೀಗಾಗಿ ಜಲಾಶಯ ಭರ್ತಿಯಾಗದಿದ್ದರೆ ಮುಂದೆ ಹೇಗೆ? ಎಂದು ಆಲೋಚನೆ ಮಾಡದೆ ತಕ್ಷಣ ಕಾಲುವೆಗಳಿಗೆ ನೀರು ಹರಿಸಲು ಆದೇಶ ಮಾಡಬೇಕು ಎಂದು ಅವರು ಕೋರಿದ್ದಾರೆ.

# ಲಿಂಗತತ್ವ ನಿಷ್ಠ ಹಡಪದ ಅಪ್ಪಣ್ಣ

## ಸಾವಿಲ್ಲದ ಶರಣರು

■ ಉದಯರಶ್ಮಿ ದಿನಪತ್ರಿಕೆ

ಹಡಪದ ಅಪ್ಪಣ್ಣನವರು 12ನೇ ಶತಮಾನದ ವಚನಕಾರರು ಮತ್ತು ಬಸವಣ್ಣನವರ ಆಪ್ತ ಕಾರ್ಯದರ್ಶಿ. ಇವರು ಬಸವಣ್ಣನವರ ಬಲಗೈ ಬಂಟ–ರೆಂದು ಪ್ರಸಿದ್ಧರು. 'ಅನುಭವ ಮಂಟಪದಲ್ಲಿ' ಪ್ರಮುಖ ಪಾತ್ರ ವಹಿಸಿದ್ದರು. ಇವರು 'ಬಸವಪ್ರಿಯ ಕೂಡಲ ಚೆನ್ನಬಸವಣ್ಣ' ಎಂಬ ಅಂಕಿತನಾಮದಲ್ಲಿ 250ಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದಾರೆ. ಇವರ ಪತ್ನಿ ಲಿಂಗಮ್ಮನವರು ಕೂಡ ವಚನಗಾರ್ತಿಯಾಗಿದ್ದರು

ಅಪ್ಪಣ್ಣನ ಹೆಸರಿನ ಹಿಂದೆ ಸೇರಿದ 'ಸಂಗಮೇಶ್ವರ' (ಕೂಡಲಸಂಗಮ) ಈತನ ಸ್ಥಳವಾಗಿರಬೇಕು. ವಚನಗಳಲ್ಲಿ ಲಿಂಗ ತತ್ವ ಷಟಸ್ಥಲ ಬೋಧೆ ಕಾಯಕ ದಾಸೋಹದ ಮಹತ್ವ ಮುಂತಾದ ಅನೇಕ ವಿಷಯಗಳ ಮೇಲೆ ಭಿನ್ನ ಚಿಂತನೆ ನಡೆಸಿದವರು.

ಎಲ್ಲವೂ ತಾತ್ವಿಕವಾಗಿವೆ. ಅನ್ಯಮತ ಖಂಡನೆ, ಶಿವಪಾರಮ್ಯ ಸ್ಥಾಪನೆಗೆ ವಿಶೇಷ ಸ್ಥಾನ ಸಂದಿದೆ. ಶರಣಸ್ತುತಿ, ಶೂನ್ಯಸಿಂಹಾಸನ, ಅನುಭವ ಮಂಟಪಗಳ ಉಲ್ಲೇಖ, ಪ್ರಭುದೇವರು ಕಲ್ಯಾಣಕ್ಕೆ ಬಂದ ಪ್ರಸಂಗ ಮತ್ತು ಆರೋಗಣೆ ನಡೆಸಿದ ಸಂದರ್ಭಗಳನ್ನು ಪ್ರಸ್ತಾಪಿಸುವುದು ಮಹತ್ವದ ಅಂಶಗಳೆನಿಸಿವೆ. ತುಂಬ ದೀರ್ಘವಾಗಿದ್ದು ಗದ್ಯಲಕ್ಷಣವನ್ನು ಹೊಂದಿದ ರಚನೆಗಳ ಜೊತೆಗೆ ಮುಕ್ತಕ ರೂಪದ ವಚನಗಳೂ ಸಮಾವೇಶಗೊಂಡಿವೆ.

ಲಿಂಗತತ್ವ ಸಂಗಮೇಶ್ವರ ಅಪ್ಪಣ್ಣನಿಗೆ ಅಪಾರವಾಗಿದೆ. ತರ್ಕಶಕ್ತಿ ಅಗಾಧವಾಗಿದೆ. ಲಿಂಗಾಯತ ತತ್ವ ಪ್ರತಿಪಾದನೆ ವಿಶೇಷವಾಗಿ ಕಂಡು ಬರುತ್ತದೆ. ಶಿವಪಾರಮ್ಯ, ಅನ್ಯಮತ ಖಂಡನೆ, ಬ್ರಾಹ್ಮಣರ ಕರ್ಮಠತನದ ಖಂಡನೆ, ಅಷ್ಟಾವರಣ, ಪಂಚಾಚಾರಗಳ ವಿವರಣೆ ಇವನ ವಚನಗಳಲ್ಲಿ ಬಂದಿದೆ.

ಸಂಗಮೇಶ್ವರ ಅಪ್ಪಣ್ಣ ಮತ್ತು ಹಡಪದ ಅಪ್ಪಣ್ಣ ಇಬ್ಬರೂ ಒಬ್ಬರೇ


ಇತ್ತೀಚಿನ ನನ್ನ ಅಧ್ಯಯನ ಮತ್ತು ಸಂಶೋಧನೆಯಿಂದ ನಾನು ಸಂಗಮೇಶ್ವರ ಅಪ್ಪಣ್ಣ ಮತ್ತು ಹಡಪದ ಅಪ್ಪಣ್ಣ ಇಬ್ಬರೂ ಒಬ್ಬರೇ ಎಂದು ಖಚಿತಪಡಿಸಲು ಇಚ್ಛಿಸುತ್ತೇನೆ. ಇದಕ್ಕೆ ಕೆಲ ಪುರಾವೆಗಳನ್ನೂ ಇಲ್ಲಿ ನೀಡುತ್ತಿದ್ದೇನೆ.

1 ವಚನಾಂಕಿತ – ಬಸವಪ್ರಿಯ ಕೂಡಲ ಚೆನ್ನಸಂಗಮದೇವ –ಈ ವಚನಾಂಕಿತ ಸಂಗಮೇಶ್ವರ ಅಪ್ಪಣ್ಣ ಮತ್ತು ಹಡಪದ ಅಪ್ಪಣ್ಣನವರ ವಚನಾಂಕಿತವಾಗಿದ್ದು ಇಬ್ಬರೂ ಒಬ್ಬರೇ ಎನ್ನುವ ನಿರ್ಧಾರ ಬಲವಾಗುತ್ತದೆ.

2 ಇಬ್ಬರ ವಚನಗಳಲ್ಲಿ –ಲಿಂಗ ತತ್ವ ಷಟಸ್ಥಲ, ಸಿದ್ಧಾಂತ ಅಪಾರವಾಗಿ ಕಂಡು ಬರುತ್ತದೆ. ವಚನ ರಚನಾ ಕೌಶಲ್ಯ,ಭಾವ,ಚಿಂತನೆಗಳು ಒಂದೇ ರೀತಿಯಾಗಿ ಕಂಡು ಬರುತ್ತವೆ.

3 ಹಡಪದ ಅಪ್ಪಣ್ಣ ಮತ್ತು ಸಂಗಮೇಶ್ವರ ಅಪ್ಪಣನವರ ವಚನಗಳಲ್ಲಿ ತಮ್ಮ ಬಸವಣ್ಣನವರ ಸಂಬಂಧವು ಎದ್ದು ಕಾಣುತ್ತದೆ,ಹೀಗಾಗಿ ಇಬ್ಬರೂ ಬೇರೆ ಬೇರೆ ಅಲ್ಲ ಒಬ್ಬರೇ ಎಂದು ನಿರ್ಧರಿಸಬಹುದು.

3 ಹಡಪದ ಅಪ್ಪಣ್ಣ ಬಾಗೇವಾಡಿಯ ಹತ್ತಿರದ ಮುಸುಬಿನಾಳ ಗ್ರಾಮದವರನು,




ಅವನ ಹೆಂಡತಿ ಲಿಂಗಮ್ಮ ಅದೇ ಊರಿನ ಹೂಗಾರ ನಾಗಪ್ಪನ ಮಗಳು ಎಂದು ಇತ್ತೀಚಿನ ಅಧ್ಯಯನ ಮತ್ತು ಸಂಶೋಧನೆಯಿಂದ ತಿಳಿದು ಬರುತ್ತದೆ. ಬಾಲಕ ಬಸವಣ್ಣ ಬಾಗೇವಾಡಿ ಅಗ್ರಹಾರದ ವಿರುದ್ಧ ಬಂಡೆದ್ದು ಮನೆ ಬಿಟ್ಟು ಹೋಗುವಾಗ



ಅಕ್ಕ ಅಕ್ಕನಾಗಮ್ಮ ಪತಿ ಶಿವಸ್ವಾಮಿ ಜೊತೆಗೆ ಹಿರಿಯ ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮ ಅವರ ಜೊತೆಗೆ ಕೂಡಲ ಸಂಗಮಕ್ಕೆ ಹೋಗಿರಬಹುದು. ಹನ್ನೆರಡು ವರುಷ ಕೂಡಲ ಸಂಗಮದಲ್ಲಿ ಇದ್ದು ತನ್ನ ಕಾಯಕ ಮಾಡುತ್ತಾ ಬಸವಣ್ಣನವರ ಅಧ್ಯಯನಕ್ಕೆ ಸಹಾಯ ಮಾಡುತ್ತ ಮುಂದೆ ಮಂಗಳವೇಡೆಗೆ ಹೋಗಿ ಬಸವಣ್ಣನವರ ನೆರಳಂತೆ ನಿಂತದ್ದು ಸ್ಪಷ್ಟವಾಗಿ ಕಂಡು ಬರುತ್ತದೆ.

4 ಮಾದಲಾಂಬಿಕೆಯ ತಾಯಿಯ ತವರು ಮನೆ ಕೂಡಲಸಂಗಮವಾಗಿದ್ದು ಬಾಗೇವಾಡಿ ಅಗ್ರಹಾರ ತೊರೆದ ಬಸವಣ್ಣನಿಗೆ ಆಶ್ರಯಕ್ಕೆ ಬಂದಿದ್ದು ಮಾದಲಾಂಬಿಕೆಯ ತಾಯಿಯ ತವರು ಮನೆ ಕೂಡಲ ಸಂಗಮ, ಸಹೋದರ ಮಾವ ಬಲದೇವನು ಸಹಾಯ ಮಾಡಿದ್ದೂ ಗಮನಾರ್ಹ, ಇದನ್ನು ಜಾನಪದ ಕವಿಗಳು ಹೇಳುತ್ತಾರೆ.

5 ಬಹಳ ವರ್ಷಗಳವರೆಗೆ ಹಡಪದ ಅಪ್ಪಣ್ಣ ಕೂಡಲ ಸಂಗಮದಲ್ಲಿ ಇದ್ದ ಕಾರಣ ಅವನನ್ನು ಕಲ್ಯಾಣದ ಶರಣ–ರು ಆರಂಭದಲ್ಲಿ ಸಂಗಮೇಶ್ವರ ಅಪ್ಪಣ್ಣ ಎಂದು ಕರೆದಿರಬಹುದು, ಮುಂದೆ ಅಪ್ಪಣ್ಣ ಕಲ್ಯಾಣಕ್ಕೆ ಬಂದ ಮೇಲೆ ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿ ನೇಮಕಗೊಂಡ ಮೇಲೆ ಆಡಳಿತದ ಆಸ್ಥಾನದ ಕಡತಗಳನ್ನು, ಕಚೇರಿ ಪತ್ರಗಳನ್ನು, ಮಂತ್ರಿಯ ಆದ–'ೇಶಗಳನ್ನು ಇಡಲು ಅಡಪ ( ಕಟ್ಟಿಗೆಯ ಡಬ್ಬಿ) ತನ್ನೊಂದಿಗೆ ಇಡುತ್ತಿದ್ದನು.

ಕಲ್ಯಾಣಕ್ರಾಂತಿಯಲ್ಲಿ ಹಡಪದ ಅಪ್ಪಣ್ಣನವರ ಪಾತ್ರ ಬಲು ದೊಡ್ಡದು, ಬಸವಣ್ಣನವರ ಯೋಜನೆ ಚಿಂತನಾಕ್ರಮದಲ್ಲಿ ಪಾಲ್ಗೊಂಡ ವೈಚಾ–ರಿಕ ಶರಣ, ಬಸವಣ್ಣನವರ ಆಸೆಯಂತೆ ಹಡಪದ ಅಪ್ಪಣ್ಣನವರು ನೀಲಾಂಬಿಕೆಯನ್ನು ಕೂಡಲಸಂಗಮಕ್ಕೆ ಕರೆ ತರಲು ಹೇಳಿದಾಗ, ಅವರ ಆದೇಶದಂತೆ ಅಪ್ಪಣ್ಣನವರು ನೀಲಮ್ಮನನ್ನು ಕರೆದುಕೊಂಡು ಬರುವಾಗ ತಂಗಡಗಿಗೆ ಬಂದಾಗ ಬಸವಣ್ಣನವರ ಸಾವಿನ ಸುದ್ಧಿ ಕೇಳಿಬರುತ್ತದೆ, ಆಗ ನೀಲಮ್ಮ ಮತ್ತು ಅಪ್ಪಣ್ಣನವರು ಅಲ್ಲಿಯೇ ಐಕ್ಯವಾಗಿದ್ದು ನದಿಯ ದಡದಲ್ಲಿ ಇಬ್ಬರ ಸಮಾಧಿಯ ಕುರುಹು ಸ್ಮಾರಕಗಳು ಕಂಡು ಬರುತ್ತವೆ.

ಹಡಪದ ಅಪ್ಪಣ್ಣ ಮತ್ತು ಸಂಗಮೇಶ್ವರ ಅಪ್ಪನವರ ವಚನಗಳಲ್ಲಿ ಸಾಮ್ಯತೆ

ಹಡಪದ ಅಪ್ಪಣ್ಣ ಮತ್ತು ಸಂಗಮೇಶ್ವರ ಅಪ್ಪನವರ ವಚನಗಳಲ್ಲಿ ಸಾಮ್ಯತೆಯಿದೆ. ಬಹುತೇಕ ವಚನಗಳಲ್ಲಿ ಲಿಂಗ ತತ್ವ ಷಟಸ್ಥಲ ತಾತ್ವಿಕ ಚಿಂತೆಗಳಲ್ಲಿ ಸಾಮ್ಯತೆ ಎದ್ದು ಕಾಣುತ್ತದೆ. ಹೀಗಾಗಿ ಇವರಿಬ್ಬರೂ ಒಬ್ಬರೇ ಎನ್ನುವ ತೀರ್ಮಾನಕ್ಕೆ ಬರಲಾಗುವುದು.

ಹಡಪದ ಅಪ್ಪಣ್ಣ ಕ್ಷೌರಿಕ ವೃತ್ತಿಯವನೇ?

ಅಡಪ ಜನಬಳಕೆಯಲ್ಲಿ ಹಡಪ ಆಗಿದೆ. ಅಡಪವನ್ನು ಇಟ್ಟುಕೊಂಡವ ಅಡಪದವ ಅಥವಾ ಹಡಪದ ಎಂದು ಬಂದಿದೆ. ಕಲ್ಯಾಣದ ಚಾಲುಕ್ಯರ ಕಳಚೂರ್ಯರ ರಾಜ್ಯದ ವಿಸ್ತಾರ ಎಷ್ಟಿತ್ತೆಂದರೆ ಛಪ್ಪನ್ನೈವತ್ತಾರು ರಾಜ್ಯಗಳಿದ್ದವು ಅರ್ಥ ಸಚಿವ ದಂಡನಾಯಕನಾಗಿದ್ದನು. ಇವರ ಆಪ್ತ ಕಾರ್ಯದರ್ಶಿಯಾಗಿ ಹಡಪದ ಅಪ್ಪಣ್ಣ ಕಲ್ಯಾಣದಲ್ಲಿ ಕ್ಷೌರಿಕ ವೃತ್ತಿಯನ್ನು ಕೈಗೊಂಡಿದ್ದನು ಎಂದೆನ್ನುವುದು ನನ್ನ ದೃಷ್ಟಿಯಲ್ಲಿ ಸರಿ ಅನಿಸುವುದಿಲ್ಲ. ರಾಜ್ಯಾಡಳಿತ ದಾಖಲೆಗಳು ಕಾಗದ ಪಾತ್ರಗಳು ಬೇರೆ ಬೇರೆ ರಾಜರ ಸಾಮಂತರ ಒಲೆಗಳು ಮುಂತಾದ ಅನೇಕ ಮಹತ್ತರ ದಾಖಲೆಗಳನ್ನು ಸಂಗ್ರಹಿಸಿ ಇಡಲು ಕಟ್ಟಿಗೆಯಿಂದ ಮಾಡಿದ ಒಂದು ಡಬ್ಬಿ ಅದಕ್ಕೆ ಈಗಲೂ ಅಡಪ ಎಂದು ಉತ್ತರ ಕರ್ನಾಟಕದಲ್ಲಿ ಕರೆಯುತ್ತಾರೆ. ಮಹಾ ಮನೆಯಲ್ಲಿ ಪ್ರಸಾದವಾದ ಮೇಲೆ ತಾಂಬೂಲ ವಿತರಿಸುವ ರೇಚಣ್ಣನೂ ಅಡಪವನ್ನು ಹೊಂದಿದ್ದನ್ನು . ಅಡಪವನ್ನು ಹೊಂದಿದವ ಅಡಪದವ ಅಥವಾ ಹಡಪದ ಎಂಬ ತಪ್ಪು ಉಚ್ಚಾರಣೆಯಿಂದಾಗಿ ಹಡಪದ ಎಂದು ಹೆಸರು ಬಂತು. ಕ್ಷೌರಿಕ ಕಾರ್ಯವನ್ನು ಮಾಡುವವರು ಈಗಲೂ ಕೂಡ ಹಳ್ಳಿಯಲ್ಲಿ ಅಡಪವನ್ನು ಇಟ್ಟುಕೊಂಡು ಮನೆ ಮನೆಗೆ ಹೋಗಿ ಕ್ಷೌರಿಕ ಸೇವೆ ಮಾಡುತ್ತಾರೆ. ಹಡಪದ ಅಪ್ಪಣ್ಣನವರು ಕ್ಷೌರಿಕ ಕುಲದಲ್ಲಿ ಹುಟ್ಟಿದರೂ ಸಹಿತ ಅವರು ಪ್ರಧಾನಿ ಬಸವಣ್ಣನವರ ಆಪ್ತ

1.ಬಸವ ದರ್ಶನ ಪ್ರೊ.ದೇ.ಜ.ಗೌ ಜಗತ್ ಗುರು ಶ್ರೀ ಶಿವರಾತ್ರಿಶ್ವರ ಗ್ರಂಥಮಾಲೆ,ಮೈಸೂರು. 2004.
2.ಶರಣತತ್ವ ಚಿಂತನ ಸಂ. ಡಾ. ಎ. ಎಲ್. ಶಿವರುದ್ರಪ್ಪ
3.ವಚನ ಸಾಹಿತ್ಯ ಸಂಗ್ರಹ ಸಂ. ಶಿ .ಭೂಸನೂರಮಠ
4 ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮ – ಡಾ ಶಾರದಾಮಣಿ ಹುನಶಾಳ
5 ಕನ್ನಡ ಜಾನಪದ ಗೀತೆಗಳು –ಡಾ ಬಿ ಎಸ ಗದ್ದಗಿಮಠ
6 ಕಣಜ
7 ವಚನ ಸಂಪುಟ
8 ವಚನ ಸಂಚಯ

ಎಂದು ಬಸವಣ್ಣನವರ ವಚನವೊಂದರಲ್ಲಿ ಕಾಣಬಹುದು. ಮಹಾರಾಷ್ಟ್ರದ ಮಂಗಳವೇಡೆ, ಉದ್ಗೀರ, ಲಾತೂರ, ಸೋಲಾಪುರ, ತುಳಜಾಪುರ, ಪಂಡರಾಪುರ ಜತ್ತ ಅಕ್ಕಲಕೋಟ ಮುಂತಾದ ಪ್ರದೇಶಗಳ ಭೂ ಪ್ರದೇಶವು ಆಂಧ್ರ ವೆಂಗಿಪಳು ಕರ್ನಾಟಕ ಮುಂತಾದ ಪ್ರದೇಶಗಳನ್ನು ಮುಂತಾದ ಕಡೆಗಳಲ್ಲಿ ಚಾಲುಕ್ಯ ರಾಜ್ಯರ ಆಡಳಿತದ ಶಿಲ್ಪ ಕಲೆ ಶಾಸನಗಳು ಮತ್ತು ಗುಡಿ ಗೋಪುರಗಳ ಶೈಲಿ ಚಾಲುಕ್ಯರದ್ದಾಗಿತ್ತು.

ಬಿಜ್ಜಳನೂ ಕ್ಷೌರಿಕ ಕುಲದ ಶೈವನೆಂದು ಕೆಲ ಸಂಶೋಧಕರು ತಮ್ಮ ಅಭಿಮತ ವ್ಯಕ್ತ ಪಡಿಸಿದ್ದಾರೆ. ಹಡಪದ ಅಪ್ಪಣ್ಣ ಅವನ ಹೆಂಡತಿ ಮುಸುಬಿನಾಳ ಹೂಗಾರ ನಾಗಪ್ಪನ ಮಗಳು ಲಿಂಗಮ್ಮ ಎಂದು ತಿಳಿದು ಬರುತ್ತದೆ. ಬಸವಣ್ಣ ಬಿಜ್ಜಳನ ಪ್ರಧಾನಿ ಕಾರ್ಯದರ್ಶಿಯಾಗಿ ಕಾರ್ಯ ಮಾಡಿದರು ಎಂದು ತಿಳಿದು ಬರುತ್ತದೆ.

### ಹಡಪದ ಅಪ್ಪಣ್ಣ ವಿವರ

**ಕಾಲ – ಹನ್ನೆರಡನೆಯ ಶತಮಾನ ಬಸವ ಸಮಕಾಲೀನ ಶರಣ**
**ಒಟ್ಟು ವಚನಗಳು – 102**
**ಅಂಕಿತ: ಬಸವಪ್ರಿಯ ಕೂಡಲ ಚೆನ್ನಸಂಗಮದೇವ**
**ಊರು– ಕೂಡಲ ಸಂಗಮ, ಮುಸುಬಿನಾಳ**

ಚೆನ್ನಬಸವಣ್ಣನವರ ಮೇಲೆ ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮರ ಪ್ರಭಾವ

ಬಸವಣ್ಣನವರು ಬಾಗೇವಾಡಿ ಅಗ್ರಹಾರವನ್ನು ಬಿಟ್ಟು ಕೂಡಲ ಸಂಗಮಕ್ಕೆ ಹೋಗುವಾಗ ಅಕ್ಕನಾಗಮ್ಮ ಮತ್ತು ಅವಳ ಪತಿ ಶಿವಸ್ವಾಮಿಗಳ ಜೊತೆಗೆ ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮನವರೂ ಹೋಗಿದ್ದರು. ಹಡಪದ ಅಪ್ಪಣ್ಣ ಕೂಡಲ ಸಂಗಮದಲ್ಲಿ ಮಾದಲಾಂಬಿಕೆಯ ತವರು ಮನೆಯಲ್ಲಿ ಕೃಷಿ ಮಾಡುತ್ತಿರಬಹುದು ಅಥವಾ ಬಸವಣ್ಣನವರು ತಮ್ಮ ಶಿಕ್ಷಣವನ್ನು 12 ವರುಷ ಕೂಡಲ ಸಂಗಮದಲ್ಲಿ ಮಾಡುತ್ತಿರುವಾಗ ಕ್ಷೌರಿಕ ವೃತ್ತಿಯನ್ನು ಮಾಡುತ್ತಿರಬಹುದು. ಬಲದೇವರ ಆಮಂತ್ರಣದ ಮೇರೆಗೆ ಬಸವಣ್ಣ ಅಕ್ಕನಾಗಮ್ಮ ಬಾಲಕ ಚೆನ್ನಬಸವಣ್ಣ ಮತ್ತು ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮ ಮಂಗಳವೇಡೆಗೆ ಹೋದರು.

ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮ ಅವರಿಗೆ ಮಕ್ಕಳಿರುವ ದಾಖಲೆಗಳು ಕಂಡು ಬಂದಿಲ್ಲ, ಹೀಗಾಗಿ ಬಾಲಕ ಚೆನ್ನಬಸವಣ್ಣ ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮನವರ ಮಮತೆಯ ಮಡಿಲಿನಲ್ಲಿ ಬೆಳೆದಿರಲು ಸಾಧ್ಯವಿದೆ. ಹೀಗಾಗಿ ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮರ ವಚನಗಳಲ್ಲಿ ಚೆನ್ನಬಸವಣ್ಣನವರ ಅಂಕಿತದ ಭಾಗ ಸೇರ್ಪಡೆಗೊಂಡಿದೆ. ಹಡಪದ ಅಪ್ಪಣ್ಣನವರ ಬಸವಪ್ರಿಯ ಬಸವಪ್ರಿಯ ಕೂಡಲ ಚೆನ್ನಬಸವಣ್ಣ ಎಂಬ ಅಂಕಿತ ದೊಂದಿಗೆ ಸುಮಾರು 250 ವಚನಗಳನ್ನು ರಚಿಸಿದ್ದಾರೆ. ಅದೇ ರೀತಿ ಸಂಗಮೇಶ್ವರದ ಅಪ್ಪಣ್ಣ ಎನ್ನುವ ಅಂಕಿತದೊಂದಿಗೆ 102 ವಚನಗಳನ್ನು ಸೇ–ರಿಸಿದರೆ ಒಟ್ಟು 352 ವಚನಗಳು ಹಡಪದ ಅಪ್ಪಣ್ಣನವರು ರಚಿಸಿದ್ದಾರೆ ಎಂದು ತೀರ್ಮಾನಕ್ಕೆ ಬರಬಹುದು. ಅವರ ಪತ್ನಿ ಲಿಂಗಮ್ಮ 'ಅಪ್ಪಣ್ಣಪ್ರಿಯ ಚೆನ್ನಬಸವಣ್ಣ' ಅಂಕಿತದಲ್ಲಿ 114 ವಚನಗಳನ್ನು ರಚಿಸಿದ್ದಾರೆ.

ಹಡಪದ ಅಪ್ಪಣ್ಣನವರ ಒಂದೇ ಒಂದು ವಚನದಲ್ಲಿ ಹಡಪಿ ಎಂಬ ಪದ ಬಳಕೆಯಾಗಿದೆ ಹೊರತು ಕ್ಷೌರಿಕ ಕಾಯಕದ ಬಗ್ಗೆ ಎಲ್ಲಿಯೂ ಉಲ್ಲೇಖವಾಗಿಲ್ಲ. ಇವರಿಬ್ಬರ ಪ್ರಭಾವ ಚೆನ್ನಬಸವಣ್ಣನವರ ಮೇಲಾದ ಕಾರಣ ಚೆನ್ನಬಸವಣ್ಣನವರ ವಚನಗಳಲ್ಲಿ ಲಿಂಗ ತತ್ವ ಪ್ರಧಾನವಾಗಿ ಕಂಡು ಬರುತ್ತದೆ. ಚೆನ್ನಬಸವಣ್ಣನವರು ಷಟಸ್ಥಲ ಸಿದ್ಧಾಂತಗಳ ಮೇಲೆಪ್ರಭುತ್ವವನ್ನು ಸಾಧಿಸಲು ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮರ ಪ್ರಭಾವವಿರಬಹುದು.

ಬಸವಣ್ಣನವರ ಪರಮಾಪ್ತ ಹಡಪದ ಅಪ್ಪಣ್ಣ

ಬಸವಣ್ಣನವರಿಗೆತಮ್ಮ ಬಾಲ್ಯದಿಂದಲೂ ಹಡಪದ ಅಪ್ಪಣ್ಣನವರ ಒಡನಾಟವಿತ್ತು. ಹಡಪದ ಅಪ್ಪಣ್ಣ ಬಸವಣ್ಣನವರಿಗಿಂತ ಹತ್ತು ವರುಷ ದೊಡ್ಡವರಿರಬಹುದು. ಬಸವಣ್ಣ ಕೂಡಲ ಸಂಗಮಕ್ಕೆ ಹೋಗುವಾಗ ಅವರ ನೆರಳಾಗಿ ಬಸವಣ್ಣನವರಿಗೆ ರಕ್ಷಣೆ ನೀಡಿದವರು ಹಡಪದ ಅಪ್ಪಣ್ಣನವರು. ಕೂಡಲಸಂಗಮದಲ್ಲಿ ಬಸವಣ್ಣನವರ ಶಿಕ್ಷಣ ಮುಗಿಸಿ ಸೋದರಮಾವ ಕಲ್ಯಾಣದ ಮಂತ್ರಿ ಬಲದೇವನವರ ಆಶಯದಂತೆ ಬಸವಣ್ಣನವರ ಜೊತೆಗೆ ಹಡಪದ ಅಪ್ಪಣ್ಣನವರು ಅಂಗರಕ್ಷಕರಾಗಿದ್ದರು. ಬಸವಣ್ಣನವರು ಕಲ್ಯಾಣವನ್ನು ತೊರೆದ ಮೇಲೆ ಅವರ ಜೊತೆಗೆ ಹಡಪದ ಅಪ್ಪಣ್ಣನವರು ಕೂಡಲಸಂಗಮಕ್ಕೆ ಹೋಗುವರು. ಬಸವಣ್ಣನವರು ತಮ್ಮ ವಿಚಾರ ಪತ್ನಿ ನೀಲಮ್ಮ ತಾಯಿಯನ್ನು ಕೂಡಲ ಸಂಗಮಕ್ಕೆ ಕರೆ ತರಲು ಹೇಳಿದಾಗ ಕಲ್ಯಾಣದಲ್ಲಿ ಬಸವಣ್ಣನಿಲ್ಲದ ವ್ಯಾಕುಲತೆ ಆತಂಕ ಭಯ ಭೀತಿ ಸ್ಥಿತಿಯನ್ನು ನಿವಾರಿಸಲು ನೀಲಮ್ಮ ಶರಣರಲ್ಲಿ ಧೈರ್ಯ ಸ್ಥೈರ್ಯ ತುಂಬುವ ಕಾರ್ಯದಲ್ಲಿ ನಿರತಳಾಗಿದ್ದಳು. ಬಸವಣ್ಣನವರ ಆದೇಶದಂತೆ ನೀಲಮ್ಮ ಹಡಪದ ಅಪ್ಪಣ್ಣನವರ ಜೊತೆಗೆ ಕೂಡಲ ಸಂಗಮಕ್ಕೆ ಬರುವ ಹಾದಿಯಲ್ಲಿ ತಂಗಡಗಿ ಎಂಬಲ್ಲಿ ಬಸವಣ್ಣನವರ ಬಯಲಾದ ಸುದ್ದಿ ಕೇಳಿ ಬಲು ನೊಂದು ತಂಗಡಗಿಯಲ್ಲಿಯೇ ಕೆಲಕಾಲ ತಂಗಿ ತನ್ನ ದುಃಖದ ನೋವಿನ ವಚನಗಳನ್ನು ರಚಿಸಿ ಅಲ್ಲಿಯೇ ಐಕ್ಯಳಾಗುತ್ತಾಳೆ. (ತಂಗಿ ಅಡಗಿದ ಊರು ತಂಗಡಗಿ ) ಹಡಪದ ಅಪ್ಪಣನವರೂ ಕೂಡ ತಂಗಡಗಿಯಲ್ಲಿ ಐಕ್ಯರಾಗುತ್ತಾರೆ.

ಬಸವಣ್ಣನವರು ಸ್ಥಾಪಿಸಿದ ಲಿಂಗಾಯತ ಧರ್ಮಕ್ಕೆ ಹಡಪದ ಅಪ್ಪಣ್ಣನವರ ಮತ್ತು ಲಿಂಗಮ್ಮನವರ ಕೊಡುಗೆ ಅಪಾರವಾಗಿದೆ .

ಹಡಪದ ಅಪ್ಪಣ್ಣ ಮತ್ತು ಸಂಗಮೇಶ್ವರ ಅಪ್ಪಣ್ಣ ಇಬ್ಬರೂ ಒಬ್ಬರೇ ಎನ್ನಲು ಅನೇಕ ಪುಷ್ಟಿಗಳು ದೊರೆಯುತ್ತವೆ.



**ಲೇಖಕ**
**– ಡಾ ಶಶಿಕಾಂತ ಪಟ್ಟಣ**
**ರಾಮದುರ್ಗ**
**ಮೊ: 9552002338**



# ದೇಶದ ವಿವಿಧ ಭಾಗಗಳಿಂದ ಸೈಕಲ್ ಮೂಲಕ ಪಂಢರಪುರ ಕ್ಷೇತ್ರಕ್ಕೆ ಆಗಮಿಸಿದ ಸೈಕ್ಲಿಂಗ್ ಗ್ರುಪ್ ಸದಸ್ಯರು

## ವಿಶಿಷ್ಟವಾಗಿ ಜರುಗಿದ ಪಂಡರಪುರ ಸೈಕಲ್ ವಾರಿ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಆಷಾಡ ಏಕಾದಶಿ ನಿಮಿತ್ತ ದೇಶದ ವಿವಿಧ ಭಾಗಗಳಿಂದ ಸೈಕಲ್ ಮೂಲಕ ಪಂಢರಪುರ ಕ್ಷೇತ್ರಕ್ಕೆ ಆಗಮಿಸುವ ಸೈಕಲ್ ವಾರಿ ಕಾರ್ಯಕ್ರಮ ವಿಶಿಷ್ಟ ಪೂರ್ಣವಾಗಿ ಜರುಗಿತು.

ಪಂಢರಪುರ ವಿಠೋಬಾ ದರ್ಶನಕ್ಕೆ ಪ್ರತಿವರ್ಷವೂ ಕಾಲುನಡಿಗೆಯಲ್ಲಿ ಲಕ್ಷಾಂತರ ಭಕ್ತರು ಪಾಲ್ಗೊಳ್ಳುವುದು ಸಂಪ್ರದಾಯ. ಆದರೆ ಕಳೆದ 2–3 ವರ್ಷಗಳಿಂದ ಕೆಲವು ಉತ್ಸಾಹಿ ಸೈಕ್ಲಿಂಗ್ ಸಂಘಟಕರು ಸೇರಿ ಆರಂಭಿಸಿದ ಸೈಕಲ್ ವಾರಿ ಕಾರ್ಯಕ್ರಮದಲ್ಲಿ ನೋಂದಾಯಿಸಿಕೊಂಡ ಸೈಕ್ಲಿಂಗ್ ಗ್ರುಪ್ ಸದಸ್ಯರು ತಮ್ಮ ತಮ್ಮ ಸ್ಥಳಗಳಿಂದ ಸೈಕಲ್ ಸವಾರಿ ಮಾಡುತ್ತಾ ಪಂಢರಪುರಕ್ಕೆ ಆಗಮಿಸುವರು. ಅಲ್ಲಿ ಹಿಂದಿನ ರಾತ್ರಿಯೆ ಸೈಕ್ಲಿಂಗ್ ಸಮ್ಮೇಳನ ನಡೆಯುವದು. ಈ ಸಮ್ಮೇಳನದಲ್ಲಿ ವಿವಿಧ ಸೈಕ್ಲಿಸ್ಟ್ ಗಳು ವಿಚಾರ ಸಂಕಿರಣಗಳಲ್ಲಿ ಮಾಹಿತಿ ವಿನಿಮಯ ಮಾಡಿಕೊಳ್ಳುವರು. ಮಾರನೆಯ ದಿನ ಬೆಳಿಗ್ಗೆ ಎಲ್ಲ ಸೈಕ್ಲಿಗಳು ತಮ್ಮ ಸೈಕಲ್ ಸವಾರಿ ಮೂಲಕ ನಗರ ಪ್ರದಕ್ಷಿಣೆ ಮಾಡಿ, ಸ್ಥಳೀಯ ಕ್ರೀಡಾಂಗಣದಲ್ಲಿ ಸಮಾವೇಶಗೊಂಡು ಸೈಕಲ್ ರಿಂಗನ್ ನಲ್ಲಿ (ವರ್ತುಲಾಕಾರದಲ್ಲಿ ಸೈಕಲ್ ತುಳಿಯುವದು) ಭಾಗವಹಿಸುವರು.

ಜುಲೈ 11 ಮತ್ತು 12 ರಂದು ನಡೆದ ಈ ಸೈಕಲ್ ವಾರಿಯಲ್ಲಿ ದೇಶದಾದ್ಯಂತ ಆಗಮಿಸಿದ 8 ಸಾವಿರ ಸೈಕ್ಲಿಸ್ಟ್ ಗಳು ಭಾಗವಹಿಸಿದ್ದರು. ವಿಜಯಪುರ ಸೈಕ್ಲಿಂಗ್ ಗ್ರುಪ್ 40 ಸದಸ್ಯರು ವಿಜಯಪು–ರಿಂದ ಪಂಢರಪುರದವರೆಗೆ 100ಕಿ.ಮೀ ಸೈಕಲ್ ಯಾತ್ರೆಯಲ್ಲಿ ಭಾಗವಹಿಸಿದ್ದರು.

ವಿಜಯಪುರ ಬಿ.ಎಂ.ಪಾಟೀಲ ವೃತ್ತದಿಂದ ಆರಂಭಗೊಂಡ ಸೈಕಲ್ ವಾರಿಗೆ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಡಾ.ಗಂಗಾಧರ ಸಂಬಣ್ಣಿ ಚಾಲನೆನೀಡಿದ್ದರು. ಈಸಂದರ್ಭದಲ್ಲಿ ವಿಸಿಜಿ ಅಧ್ಯಕ್ಷ ಡಾ.ಮಹಾಂತೇಶ ಬಿರಾದಾರ ಮಾತನಾಡಿ, ವಿಸಿಜಿಯ ಕ್ಯಾಲೆಂಡರ್ ನಲ್ಲಿ ಪಂಢರಪುರ ಸೈಕಲ್ ವಾರಿಯನ್ನು ಸೇ–ರಿಸಲಾಗಿದ್ದು, ಪ್ರತಿ ವರ್ಷವೂ ಈ ಯಾತ್ರೆಯಲ್ಲಿ ಪ್ರತಿಯೊಬ್ಬ ಸೈಕ್ಲಿಸ್ಟ್ ಪಾಲ್ಗೊಳ್ಳಬೇಕು. ಬಸವ ಜಯಂತಿ 42ಕಿ.ಮೀ ರನ್ ಮತ್ತು ಡಿಸೆಂಬರ್ ಎರಡನೆಯ ರವಿವಾರ ನಡೆಯುವ ವೃಕ್ಷೋಥಾನ್ ವಿಸಿಜಿ ಪ್ರಮುಖ ಕಾರ್ಯಕ್ರಮಗಳಾಗಿವೆ ಎಂದರು.

ಕೋಟಿ ವೃಕ್ಷ ಅಭಿಯಾನ ಸಂಚಾಲಕ ಡಾ.ಮುರುಗೇಶ ಪಟ್ಟಣಶೆಟ್ಟಿ, ವಿಠ್ಠಲ ತೇಲಿ, ರಾಜಶೇಖರ ಸಜ್ಜನ, ಪ್ರಕಾಶ ಕನ್ನೂರ, ಶಾಂತಪ್ಪ ದೇಸಾಯಿ ಉಪಸ್ಥಿತರಿದ್ದರು.

### ಸೈಕಲ್ ವಾರಿಯಲ್ಲಿ ಪಾಲ್ಗೊಂಡ ಸದಸ್ಯರು

ವಿಸಿಜಿ ಉಪಾಧ್ಯಕ್ಷ ಶಿವನಗೌಡ ಪಾಟೀಲ ನೇತೃತ್ವದಲ್ಲಿ ನಡೆದ ಸೈಕಲ್ ವಾರಿಯಲ್ಲಿ ಡಾ.ರವಿ ಚೌಧರಿ, ಡಾ.ಮಹಾಂತೇಶ ಜಾಲಗೇರಿ, ಡಾ.ರಾಜು ಯಲಗೊಂಡ, ಡಾ.ರವಿ ಸಂಖ, ಸೋಮಶೇಖರ ಸ್ವಾಮಿ, ವಿರೇಂದ್ರ ಗುಚ್ಚಟ್ಟಿ, ಅನೀಲ ಧಾರವಾಡಕರ, ಸಿದ್ದು ನಾಯ್ಕೋಡಿ, ಚಂದ್ರಹಾಸ ಬಣ್ಣದ, ಸಂತೋಷ ಸಜ್ಜನ, ಮಹೇಶ ಆಲಮೇಲ, ಮುರುಗೇಶ ಅಲಬಾಳ, ಅಂಬರೀಷ ಭೈರಗೊಂಡ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

# ವಿಜಯಪುರದಲ್ಲಿ ಆರ್ಟ ಗೀವಿಂಗ್ ಫೌಂಡೇಶನ್ ಯುವ ಸಂಚಾಲಕಿ ಶಿಫಾ ಜಮಾದಾರ ಅಭಿಮತ

## ಶಿಕ್ಷಣವು ಸಮಾನತೆಯ ಜಗತ್ತನ್ನು ಸಾದಿಸುವ ಸಾಧನವಾಗಿದೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಶಿಕ್ಷಣವು ಎಲ್ಲರಿಗೆ ಅಭಿವೃದ್ಧಿ ಶಾಂತಿ, ನ್ಯಾಯ ಸ್ವಾತಂತ್ರ ಮತ್ತು ಸಮಾನತೆಯ ಜಗತ್ತನ್ನು ಸಾದಿಸುವ ಸಾದನವಾಗಿದೆ ಹೀಗಾಗಿ ಶಿಕ್ಷಣ ಎಲ್ಲರಿಗೂ ಅತ್ಯಗತ್ಯ ಶಿಕ್ಷಣವಿಲ್ಲದೆ ಉತ್ತಮ ಜೀವನ ಸಾಧ್ಯವಿಲ್ಲ ಎಂದು ಆರ್ಟ ಗೀವಿಂಗ್ ಫೌಂಡೇಶನದ ಯುವ ಸಂಚಾಲಕಿ ಶಿಫಾ ಜಮಾದಾರ ಹೇಳಿದರು.

ನಗರದ ಗೋಲಗುಂಬಜ ಎದು–ರಿಗಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 3ರಲ್ಲಿ ಆರ್ಟ ಆಫ್ ಗೀವಿಂಗ್ ವತಿಯಿಂದ ಆಯೋಜಿಸಲಾಗಿದ್ದ ಶಿಕ್ಷಣದ ಮಹತ್ವ ಹಾಗೂ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕಿಟ ಬ್ಯಾಗಗಳನ್ನು ವಿತರಿಸಿ ಆರೋಗ್ಯ ಮತ್ತು ನೈರ್ಮಲ್ಯ ಅರಿವು ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಸುಶಿಕ್ಷಿತ ಸಮಾಜದ ಅಭಿವೃದ್ಧಿಯಿಂದ ದೇಶದ ಬೆಳವಣಿಗೆಯಾಗಲಿದೆ ಜ್ಞಾನ ಎಂಬ ಬೆಳಕಿನಿಂದ ಅಂದಕಾರ ಎಂಬ ಕತ್ತಲೆ ಹೊಗಲಾಡಿಸುತ್ತದೆ ಹೀಗಾಗಿ ಶಿಕ್ಷಣ ಬದುಕಿನ ಭಾಗವಾಗಬೇಕು ಜ್ಞಾನ ಯಾರು ಕಸಿದುಕೊಳ್ಳಲಾಗದ ಸಂಪತ್ತು ಎಂದರು. ಶುಚಿತ್ವವು ನಮ್ಮ ದೈಹಿಕ ಮಾನಸಿಕ ಮತ್ತು ಆಧ್ಯಾತ್ಮಿಕ ಆರೋಗ್ಯವನ್ನು ಹೆಚ್ಚಿಸುತ್ತದೆ ಸ್ವಚ್ಚತೆಯಿಂದ ಇರುವುದು ಲೆಕ್ಕವಿಲ್ಲದಷ್ಟು ಪ್ರಯೋಜನಗಳಿವೆ, ಶುಚಿತ್ವ ಮತ್ತು ಆರೋಗ್ಯ ಪರಸ್ಪರ ಸಂಬಂಧ ಹೊಂದಿರುವದ–ರಿಂದ ವಿದ್ಯಾರ್ಥಿಗಳು ಅನೇಕ ಸಾಂಕ್ರಾಮಿಕ ರೋಗಗಳಿಂದ ಹೊರಾಡಬಹುದು ಮತ್ತು ತಡೆಗಟ್ಟಬಹುದೆಂದರು.

ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಲಿಂ ಪೀರಜಾದೆ ಮಾತನಾಡಿ ಉತ್ತಮ ನೈರ್ಮಲ್ಯ ಉತ್ತಮ ಆರೋಗ್ಯಆತ್ಮವಿಶ್ವಾಸಮತ್ತುಒಟ್ಟಾರೆಬೆಳವಣಿಗೆಗೆ ಕಾರಣವಾಗುತ್ತದೆ ಮತ್ತು ಮಕ್ಕಳು ದೀರ್ಘ ಆರೋಗ್ಯಕರ ಜೀವನವನ್ನು ನಡೆಸಲು ಸಹಾಯ ಮಾಡುತ್ತದೆ, ಸರಕಾರಿ ಶಾಲೆಗಳಲ್ಲಿ ಇನ್ನು ಹೆಚ್ಚಿನ ಮೂಲಭೂತ ಸೌಕಯ್ಗಳನ್ನು ನೀಡಲು ಸರಕಾರ ಹೆಚ್ಚಿನ ಒತ್ತನ್ನು ನೀಡಬೇಕೆಂದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ವಾರ್ಡ ನಂ.32 ರ ಮಹಾನಗರ ಪಾಲಿಕೆ ಸದಸ್ಯ ಮಾಜಿ ಉಪಮಹಾಪೌರ ದಿನೇಶ ಹಳ್ಳಿ ಮಾತನಾಡಿ ಸ್ವಚ್ಚತೆ ಜೀವನದ ಭಾಗವಾಗಬೇಕು. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಶಾಲೆಗಳ ಮಕ್ಕಳಿಗೆ ಅರಿವು ಮೂಡಿಸಲು ಸಾಮಾಜಿಕ ಸಂಸ್ಥೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ರೂಪಿಸಲು ಸಾಮಾನ್ಯ ಸಭೆಯಲ್ಲಿ ಧ್ವನಿ ಎತ್ತುತ್ತೇನೆ. ಮತ್ತು ವಿಜಯಪುರ ಐತಿಹಾಸಿಕ ನಗರವಾಗಿದ್ದರಿಂದ ಎಲ್ಲ ನಾಗರಿಕರು ಸ್ವಚ್ಚತೆ ಕಾಪಾಡಲು ಸಹಕಾರ ನೀಡಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯೋಧ್ಯಾಪಕ ಎಂ.ಎ. ಚಿಗರೂಳಿ ವಹಿಸಿದ್ದರು. ಮೌಲಾಲಿ ಪುಂಗಿವಾಲೆ, ನಿಸಾರ ಅಹ್ಮದ ಜಾವಡಗಿ, ಹೈದರ ಹಂಚಿನಾಳ, ನೂರ ಪೀರಜಾದೆ ಉಪಸ್ಥಿತರಿದ್ದರು.



# ವಿಜಯಪುರದಲ್ಲಿ ನಾಟಕ ಅಕಾಡೆಮಿ ವತಿಯಿಂದ 'ಪ್ರಥಮ ಪಲ್ಲವ' ಕಾರ್ಯಕ್ರಮ

## ಲಲಿತಕಲೆಗಳಿಂದ ಮಕ್ಕಳಿಗೆ ಉಜ್ವಲ ಭವಿಷ್ಯವಿದೆ :ಡಾ.ರಂಜಿತಾ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ನಾಟಕ ಅಕಾಡೆಮಿ ವಿಜಯಪುರ ವತಿಯಿಂದ 'ಪ್ರಥಮ ಪಲ್ಲವ' ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿದ ಬಿಎಲ್ಡಿಇ ಕಾಲೇಜ್ ಅಸಿಸ್ಟೆಂಟ್ ಪ್ರೊಫೆಸರ್ ಡಾ.ರಂಜಿತಾ ಕೆ.ಆರ್.ಮಲ್ಲಣ್ಣ ಮಾತನಾಡಿ, ಭರತನಾಟ್ಯ ಸಂಗೀತ ಸಾಹಿತ್ಯ ಕಲೆಗಳಿಂದ ಮಕ್ಕಳಿಗೆ ಉಜ್ವಲ ಭವಿಷ್ಯವಿದೆ. ಇತ್ತೀಚಿನ ದಿನಗಳಲ್ಲಿ ಮಕ್ಕಳಿಗೆ ಮೊಬೈಲ್ ಗೀಳನ್ನು ಹೆಚ್ಚಿಸುತ್ತಿದ್ದು ಅಂತವುಗಳಿಗೆ ಕಡಿವಾಣ ಹಾಕಿ ಪಾಲಕರು ತಮ್ಮ ಮಕ್ಕಳನ್ನು ಇಂತಹ ಭರತನಾಟ್ಯ ಕಲೆ ಸಾಹಿತ್ಯ, ಸಂಗಿತ, ಶಾಲೆಗಳಿಗೆ ಮಕ್ಕಳನ್ನು ಸೇರಿಸುವುದರ ಜೊತೆಗೆ ಅವರಲ್ಲಿ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು. ಮಕ್ಕಳ ಭವಿಷ್ಯ ರೂಪಿಸುವಲ್ಲಿ ತಂದೆ ತಾಯಿಯ ಪಾತ್ರ ದೊಡ್ಡದು ಎಂದರು. ಜಿಲ್ಲಾ ಯುವ ಪರಿಷತ್ತಿನ ಅಧ್ಯಕ್ಷ ಶರಣು ಸಬರದ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಹದಿಹರೆಯದ ಯುವಕರು ಯುವತಿಯರು ಆತ್ಮಹತ್ಯೆಗಳಿಗೆ ಶರಣಾಗುತ್ತಿದ್ದು, ಜೊತೆಗೆ ಡ್ರಗ್ಸ್ ವ್ಯಸನಿಗಳಾಗುತ್ತಿದ್ದಾರೆ. ಪಾಲಕರು ತಮ್ಮ ಮಕ್ಕಳ ಚಲನವಲನ ಮೇಲೆ ನಿಗಾ ಇಡುವುದರ ಜೊತೆಗೆ ಚಿಕ್ಕ ವಯಸ್ಸಿನಲ್ಲಿ ಮಕ್ಕಳನ್ನು ಅಭ್ಯಾಸದ ಜೊತೆಗೆ ಭರತನಾಟ್ಯ ಸಂಗೀತ ಗಾಯನ ಕಲೆ, ಸಂಸ್ಕೃತಿಕ. ಸಾಹಿತ್ಯ ದಂತಹ ಕಾರ್ಯಕ್ರಮಗಳಲ್ಲಿ ಮಕ್ಕಳನ್ನು ಭಾಗಿಯಾಗಿಸಬೇಕು. ಅಂದಾಗ ಮಾತ್ರ ಇಂದಿನ ಯುವಸಮೋಹ ದಿಂದ ಸ್ವಚ್ಛ ಸುಂದರ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದು ಹೇಳಿದರು.

ಆಯೋಜಕರಾದ ಶ್ರೀಮತಿ ಲಕ್ಷ್ಮಿ ತೆರದಾಳಮಠ. ವಿದುಷಿ ಸುಭಿದಾ ದೇಶಪಾಂಡೆ, ನಾಗಶ್ರೀ ಕುಲಕರ್ಣಿ, ಪ್ರಾಚಾರ್ಯರಾದ ವಿಜಯಲಕ್ಷ್ಮಿ ಪಟೇಲ್, ನಿವೃತ್ತ ಬಿಇಓ ರವಿ ಕೊಣ್ಣೂರ್, ರಾಹುಲ್ ಜಿ., ಕುಮಾರಿ ರಕ್ಷಾ ಮುಚ್ಚಂಡಿ, ರೇಷ್ಮೆ ಜಿ, ಗೌರಿ ಜೋಶಿ ಭರತನಾಟ್ಯ ಪ್ರದರ್ಶಿಸಿದರು.

## ಡಾ. ಶಾಂತಕುಮಾರಗೆ ಡಾ.ಕಯ್ಯಾರ ಪ್ರಶಸ್ತಿ ಗರಿ

■ ಉದಯರಶ್ಮಿ ದಿನಪತ್ರಿಕೆ

ಬಾಗಲಕೋಟೆ: ಗದಗ ಜಿಲ್ಲಾ ನಗರದ ಗಾಂಧಿನಗರದ ಸರ್ಕಾರಿ ಪ್ರೌಢಶಾಲೆಯ ಕನ್ನಡ ಭಾಷಾ ಶಿಕ್ಷಕರು ಹಾಗೂ ದಲಿತ ಸಾಹಿತ್ಯ ಅಕಾಡೆಮಿ ದೆಹಲಿ ಗದಗ ಶಾಖೆಯ ಜಿಲ್ಲಾ ಕಾರ್ಯಾಧ್ಯಕ್ಷರು, ಆದರ್ಶ ಶಿಕ್ಷಕರು ಹಾಗೂ ಸಮಾಜ ಸೇವಕರಾದ ಡಾ. ಶಾಂತಕುಮಾರ ಬಿ. ಭಜಂತ್ರಿ ಅವರು ಕಾಸರಗೋಡು ಕನ್ನಡ ಭವನದ ಪ್ರತಿಷ್ಠಿತ "ನಾಡೋಜ ಡಾ.ಕಯ್ಯಾರ ಸದ್ಭಾವನಾ ಪ್ರಶಸ್ತಿ" 2026 ಗೆ ಆಯ್ಕೆಯಾಗಿದ್ದಾರೆ. ಜುಲೈ 26ರಂದು ಕಾಸರಗೋಡಿನ ಕನ್ನಡ ಭವನದಲ್ಲಿ ನಡೆಯಲಿರುವ ರಜತ ಸಂಭ್ರಮದ ಸಮಾರೋಪ ಕಾರ್ಯಕ್ರಮ ಹಾಗೂ ಕರ್ನಾಟಕ ಗಡಿನಾಡು ಕನ್ನಡ ಸಮ್ಮೇಳನದ ಅಂಗವಾಗಿ ಈ ಪ್ರಶಸ್ತಿಯನ್ನು ಗಣ್ಯರ ಸಮ್ಮುಖದಲ್ಲಿ ನೀಡಿ ಗೌರವಿಸಲಾಗುತ್ತದೆ ಎಂದು ಸಮ್ಮೇಳನ ಸಮಿತಿಯ ಅಧ್ಯಕ್ಷ ಡಾ. ಕೆ ಎನ್ ವೆಂಕಟರಮಣ ಹೊಳ್ಳ ಹಾಗೂ ಕಾಸರಗೋಡು ಕನ್ನಡ ಭವನದ ಸಂಸ್ಥಾಪಕ ಅಧ್ಯಕ್ಷ ಡಾ. ಕೆ. ವಾಮನ್ ರಾವ್ ಬೇಕಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಥಣಿಯಲ್ಲಿ ಪ್ರಗತಿ ಪರಿಶೀಲನೆ ನಡೆಸಿದ ಶಾಸಕ ಲಕ್ಷ್ಮಣ ಸವದಿ ಹೇಳಿಕೆ

# ಜೋಡಿ ಕೆರೆ ಅಭಿವೃದ್ಧಿಗೆ ವೇಗ: ಗುಣಮಟ್ಟದಲ್ಲಿ ರಾಜಿ ಇಲ್ಲ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಅಥಣಿ ಪಟ್ಟಣದ ಹೃದಯ ಭಾಗದಲ್ಲಿರುವ ಜೋಡಿ ಕೆರೆ ಅಭಿವೃದ್ಧಿ ಕಾಮಗಾರಿ ಭರದಿಂದ ಸಾಗುತ್ತಿದ್ದು, ಶಾಸಕ ಲಕ್ಷ್ಮಣ ಸವದಿ ಅವರು ಮಂಗಳವಾರ ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಅನಿ–ರೀಕ್ಷಿತವಾಗಿ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಿದರು.

ಈ ವೇಳೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಂದ ಕಾಮಗಾರಿಯ ಪ್ರಗತಿ ಕು–ರಿತು ಮಾಹಿತಿ ಪಡೆದ ಶಾಸಕ ಲಕ್ಷ್ಮಣ ಸವದಿ ಅವರು, ಸ್ಥಳದಲ್ಲಿನ ಕೆಲ ಅವ್ಯವಸ್ಥೆಗಳನ್ನು ಗಮನಿಸಿ ಸಂಬಂಧಿಸಿದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಕಾಮಗಾ–ರಿಯನ್ನು ನಿಗದಿತ ವೇಳಾಪಟ್ಟಿಯಂತೆ, ಗುಣಮಟ್ಟ ಕಾಪಾಡಿಕೊಂಡು ವ್ಯವಸ್ಥಿತವಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪರಿಶೀಲನೆ ಬಳಿಕ ಮಾತನಾಡಿದ ಶಾಸಕ ಲಕ್ಷ್ಮಣ ಸವದಿ ಅವರು, "ಅಥಣಿ ಪಟ್ಟಣದ ಜನರ ಬಹುದಿನಗಳ ಕನಸಾಗಿದ್ದ ಜೋಡಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಈಗ ವೇಗ ಸಿಕ್ಕಿದೆ. ಅಥಣಿ ಪಟ್ಟಣ ನಗರಸಭೆಯಾಗಿ ಅಭಿವೃದ್ಧಿ ಹೊಂದುತ್ತಿರುವ ಹಿನ್ನೆಲೆಯಲ್ಲಿ ಜೋಡಿ ಕೆರೆಯ ಅಭಿವೃದ್ಧಿಯಿಂದ ಪಟ್ಟಣದ ಸೌಂದರ್ಯ ಮತ್ತಷ್ಟು ಹೆಚ್ಚಲಿದೆ. ಕೆರೆಯ ಸುತ್ತಮುತ್ತ ಹಸಿರು ವಾತಾವರಣ ನಿರ್ಮಿಸಲು ವಿವಿಧ ಜಾತಿಯ ಗಿಡ–ಮರಗಳನ್ನು ನೆಡಲಾಗುವುದು. ಸಾರ್ವಜನಿಕರು ಬೆಳಿಗ್ಗೆ ಹಾಗೂ ಸಂಜೆ ವಾಯುವಿಹಾರ ನಡೆಸಲು ಅನುಕೂಲವಾಗುವಂತೆ ಕೆರೆಯ ಸುತ್ತ ಸುಸಜ್ಜಿತ ವಾಕಿಂಗ್ ಟ್ರ್ಯಾಕ್ ನಿರ್ಮಿಸಲಾಗುವುದು," ಎಂದು ತಿಳಿಸಿದರು. "ಸಾರ್ವಜನಿಕರ ಹಣದಲ್ಲಿ ನಡೆಯುವ ಅಭಿವೃದ್ಧಿ ಕಾಮಗಾ–ರಿಗಳಲ್ಲಿ ಯಾವುದೇ ರೀತಿಯ ಕಳಪೆ ಗುಣಮಟ್ಟವನ್ನು ಸಹಿಸುವುದಿಲ್ಲ. ಕಾಮಗಾ–ರಿಯನ್ನು ನಿಗದಿತ ಮಾನದಂಡಗಳಂತೆ, ಪಾರದರ್ಶಕವಾಗಿ ಹಾಗೂ ಗುಣಮಟ್ಟದಿಂದ ಪೂರ್ಣಗೊಳಿಸಬೇಕು. ಕಾಮಗಾರಿಯಲ್ಲಿ ನಿರ್ಲಕ್ಷ್ಯ ಅಥವಾ ಅವ್ಯವಸ್ಥೆಗೆ ಅವಕಾಶ ನೀಡುವುದಿಲ್ಲ," ಎಂದು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಇಲಾಖೆಯ ಅಧಿಕಾರಿಗಳು, ಗುತ್ತಿಗೆದಾರರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು

# ಜು.18 ರಂದು "ಅಂಕುರ" ಸ್ವಾಗತ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ಬದಾಮಿ: 202627ನೇ ಶೈಕ್ಷಣಿಕ ವರ್ಷದ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗಾಗಿ ಬಾಗಲಕೋಟೆ ನಗರದ ತುಂಗಳ ವಿಜ್ಞಾನ ಪದವಿ ಪೂರ್ವ ಕಾಲೇಜು ಜು.18 ಬೆಳಿಗ್ಗೆ 10:30ಕ್ಕೆ "ಅಂಕುರ" ಎಂಬ ಶೀರ್ಷಿಕೆಯಡಿ ಸ್ವಾಗತ ಕಾರ್ಯಕ್ರಮ ನವನಗರದ ಕಲಾಭವನದಲ್ಲಿ ಆಯೋಜಿ ಸಲಾಗಿದೆ.

ಕಾರ್ಯಕ್ರಮದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಮಹಾ ಭಾರತದ ವೀರ ಅಭಿಮನ್ಯುವಿನ*ಸ ಸಾಹ ಸಮಯ ಜೀವನಗಾಥ–'ಯನ್ನು ನಾಟಕ ರೂಪದಲ್ಲಿ ಮನಮೋಹಕವಾಗಿ ಪ್ರದರ್ಶಿಸಲಿದ್ದಾರೆಂದು ಕಾಲೇಜ್ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂಜಾಟ: 6 ಜನರ ಬಂಧನ

ಕಲಬುರಗಿ:ನಗರದ ಅಯ್ಯರ್ ವಾಡಿಯ ದರ್ಗಾ ಹತ್ತಿರದ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆ ಎಎಸ್ಐ ತಾರಾಸಿಂಗ್, ಸಿಬ್ಬಂದಿಗಳಾದ ಶಿವಾನಂದ, ಸುರೇಶ್, ಶಿವಶರಣ, ಅಭಿಷೇಕ ಅವರು ದಾಳಿ ನಡೆಸಿ 6 ಜನರನ್ನು ಬಂಧಿಸಿದ್ದಾರೆ.

ಚಿತ್ರಶೇಖರ್ ಮರಗುತ್ತಿ, ಜಗನ್ನಾಥ ಸುಲ್ತಾನಪೂರ, ಪ್ರಕಾಶ್ ಸೂಗೂರ, ಭೀಮಾಶಂಕರ ಬೆಳಮಗಿ, ಶರಣು ಚಿನ್ನಿ ಮತ್ತು ವಿದ್ಯಾಸಾಗರ ಪೊಟ್ನೂರ ಎಂಬುವವರನ್ನು ಬಂಧಿಸಿ 10,400 ರೂ.ನಗದು ಜಪ್ತಿ ಮಾಡಿದ್ದಾರೆ.

ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.




# ಮಕ್ಕಳು ಸಾಹಿತ್ಯಾಸಕ್ತಿ ಬೆಳೆಸಿಕೊಳ್ಳಬೇಕು

ಕಲಬುರಗಿ:"ಮಕ್ಕಳು ಸಾಹಿತ್ಯಾಸಕ್ತಿ ಬೆಳೆಸಿಕೊಳ್ಳಬೇಕು" ಎಂದು ಹಿರಿಯ ಕಲಾವಿದ ನಾಗಭೂಷಣ ಅಗಸ್ತ್ಯ ಕರೆ ನೀಡಿದರು.

ನಗರದ ಕಲಾಮಂಡಲದಲ್ಲಿ ರಂಗಾಂತರಂಗ ಸಾಂಸ್ಕೃತಿಕ ಕಲಾಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ನಾಟಕೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ನಾಟಕ, ಭರತನಾಟ್ಯ ಜಾನಪದ ನೃತ್ಯಗಳು, ಡೊಳ್ಳುಕುಣಿತ ಹಾಗೂ ಏಕಾಭಿನಯ ಪಾತ್ರಗಳು ಜರುಗಿದವು.

ಈ ಸಂದರ್ಭದಲ್ಲಿ ಅಕ್ಷಯ್ ವೆಂಕಪ್ಪ, ಜಗದೀಶ್ವರಿ ನಾಸಿ, ಸಂಕೇತ್ ಹೆಗಡೆ ಹಾಗೂ ಅಧ್ಯಕ್ಷ ಮಲ್ಲಿಕಾರ್ಜುನ್ ಉಪಸ್ಥಿತರಿದ್ದರು.

# ಕರಿಕಲ್‌ಗೆ "ಕಾಯಕ ಕಣ್ಮಣಿ" ಪ್ರಶಸ್ತಿ

ಕಲಬುರಗಿ:ಸಾಹಿತ್ಯ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ಗಮನಾರ್ಹ ಸೇವೆಯನ್ನು ಪರಿಗಣಿಸಿ ಕಲಬುರಗಿ ಜಿಲ್ಲೆಯ ಕಡಣಿ ಗ್ರಾಮದವರಾದ ಹಾಗೂ ಕುವೆಂಪು ವಿಶ್ವವಿದ್ಯಾಲಯದಲ್ಲಿ ಕರಣಿಕರಾಗಿ ಸೇವೆ ಸಲ್ಲಿಸುತ್ತಿರುವ ಶಾಂತಮಲ್ಲಪ್ಪ ಕರಿಕಲ್ ಅವರಿಗೆ ರಾಷ್ಟ್ರಮಟ್ಟದ "ಕಾಯಕ ಕಣ್ಮಣಿ" ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಜು.12 ರಂದು ಹುಬ್ಬಳ್ಳಿಯಲ್ಲಿ ಆಯೋಜಿಸಲಾಗಿದ್ದ 125 ಬೆಳಕು ಸಮ್ಮೇಳನದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರೊಂದಿಗೆ ಶಾಂತಮಲ್ಲಪ್ಪ ಕರಿಕಲ್ ಅವರಿಗೂ ಈ ಪ್ರತಿಷ್ಠಿತ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಲಾಯಿತು.

ಸಾಹಿತ್ಯ, ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಅವರು ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಈ ಗೌರವ ನೀಡಲಾಗಿದೆ. ಪ್ರಶಸ್ತಿ ಸ್ವೀಕರಿಸಿದ ಶಾಂತಮಲ್ಲಪ್ಪ ಕರಿಕಲ್ ಅವರಿಗೆ ಅವರ ಸ್ನೇಹಿತರು, ಸಾಹಿತ್ಯಾಸಕ್ತರು, ಶಿಕ್ಷಣ ಕ್ಷೇತ್ರದ ಗಣ್ಯರು ಹಾಗೂ ಅಭಿಮಾನಿಗಳು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಬಿಜೆಪಿ ಸಂಘಟನಾತ್ಮಕ ಸಭೆ: ಮತದಾರರ ಪಟ್ಟಿ ಪರಿಷ್ಕರಣೆ ಜಾಗೃತಿ ಹಾಗೂ ಪಕ್ಷ ಬಲವರ್ಧನೆಗೆ ಒತ್ತು

ಕಲಬುರಗಿ: ಸೂಫಿ ಸಂತರ ಹಾಗೂ ಶರಣ–ರ ನಾಡಾದ ಕಲಬುರಗಿಯಲ್ಲಿ ಬಿಜೆಪಿ ವತಿಯಿಂದ ನಗರ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ 'ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಖಙಖ) ಜಾಗೃತಿ ಹಾಗೂ ಸಂಘಟನಾತ್ಮಕ ಸಭೆ' ಯಶಸ್ವಿಯಾಗಿನಡೆಯಿತು.ಸಭೆಯಲ್ಲಿಪ್ರಜಾಪ್ರಭುತ್ವದ ಅಡಿಪಾಯವಾಗಿರುವ ಮತದಾರರ ಪಟ್ಟಿಯ ಪರಿಷ್ಕರಣೆಯ ಮಹತ್ವ, ಅರ್ಹ ಯುವ ಮತದಾರರ ಹೆಸರುಗಳನ್ನು ಪಟ್ಟಿಗೆ ಸೇರ್ಪಡೆಗೊಳಿಸುವ ಅಗತ್ಯ ಹಾಗೂ ಪ್ರತಿಯೊಂದು ಬೂತ್ ಮಟ್ಟದಲ್ಲೂ ಮತದಾರರಲ್ಲಿ ಜಾಗೃತಿ ಮೂಡಿಸುವ ಕುರಿತು ಸಮಗ್ರ ಚರ್ಚೆ ನಡೆಸಲಾಯಿತು. ಜೊತೆಗೆ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕಾರ್ಯಯೋಜನೆಗಳು ಮತ್ತು ಮುಂದಿನ ರಾಜಕೀಯ ಚಟುವಟಿಕೆಗಳ ಕುರಿತು ಮುಖಂಡರು ಕಾರ್ಯಕರ್ತರಿಗೆ ಮಾರ್ಗದರ್ಶನ ನೀಡಿದರು.ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, "ಪಕ್ಷದ ತತ್ವ–ಸಿದ್ಧಾಂತಗಳಿಗೆ ಬದ್ಧವಾಗಿರುವ ನಿಷ್ಠಾವಂತ ಕಾರ್ಯಕರ್ತರ ಪಡೆಯೇ ಬಿಜೆಪಿಯ ದೊಡ್ಡ ಶಕ್ತಿ. ಸಂಘಟನೆಯ ಬಲವರ್ಧನೆ ಮತ್ತು ಮತದಾರರ ಜಾಗೃತಿಯ ಮೂಲಕ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸಬೇಕು" ಎಂದು ಕರೆ ನೀಡಿದರು.


ಸಭೆಯಲ್ಲಿ ಕಲಬುರಗಿ ನಗರ ಜಿಲ್ಲಾಧ್ಯಕ್ಷ ಚಂದ್ರಕಾಂತ್ ಪಾಟೀಲ್, ಕಲಬುರಗಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್, ಮಾಜಿ ಸಂಸದ ಉಮೇಶ್ ಜಾಧವ್, ಶಾಸಕರಾದ ಶೈಲೇಂದ್ರ ಬೆಲ್ದಾಳೆ, ಪ್ರಮುಖ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಜಯದ ಮೊದಲ ಹೆಜ್ಜೆ ಧೈರ್ಯ

**ಜಯ್ ನುಡಿ (ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)**

■ ಉದಯರಶ್ಮಿ ದಿನಪತ್ರಿಕೆ

ಪ್ರಸಿದ್ಧ ಲೇಖಕಿ, ರಾಜಕೀಯ ಕಾರ್ಯಕರ್ತೆ ಮತ್ತು ಉಪನ್ಯಾಸಕಿಯಾಗಿ ಜಗತ್ತಿನಾದ್ಯಂತ ಲಕ್ಷಾಂತರ ವಿಕಲಚೇತನರಿಗೆ ಧೈರ್ಯದ ಸಂಕೇತವಾಗಿರುವ ಹೆಲೆನ್ ಕೆಲ್ಲರ್ ಜೀವನದ ಹಾದಿ ತುಂಬಾ ಕಠಿಣವಾಗಿತ್ತು. ಅವರು ಕೇವಲ 19 ತಿಂಗಳ ಮಗುವಾಗಿದ್ದಾಗ ತೀವ್ರ ಜ್ವರದ ಕಾರಣದಿಂದಾಗಿ ತಮ್ಮ ದೃಷ್ಟಿ ಮತ್ತು ಕೇಳುವ ಸಾಮರ್ಥ್ಯವನ್ನು ಕಳೆದುಕೊಂಡರು. ಇಂಥ ಪರಿಸ್ಥಿತಿಯಲ್ಲಿ ಅವರಿಗೆ ಮಾತು ಕಲಿಯುವುದು ಸಹ ಅಸಾಧ್ಯವಾಗಿತ್ತು. ಸುತ್ತಲಿನ ಸಮಾಜದೊಂದಿಗೆ ಸಂಪರ್ಕವೇ ಇಲ್ಲದೇ ಕತ್ತಲೆಯಲ್ಲಿ ಮುಳುಗುವಂತಾಗಿತ್ತು. ಹೆಲೆನ್ ಕೆಲ್ಲರ್ ಜಾಗದಲ್ಲಿ ಬೇರೆ ಯಾರೂ ಇದ್ದಿದ್ದರೆ ಇಡೀ ಜೀವನವನ್ನು ನಿರಾಸೆಯಿಂದ ಕಳೆದುಬಿಡುತ್ತಿದ್ದರು. ಆದರೆ ಹೆಲನ್ ಕೆಲ್ಲರ್ ಹಾಗೆ ಮಾಡಲಿಲ್ಲ. ತಮ್ಮ ಶಿಕ್ಷಕಿ ಸಹಾಯದಿಂದ ಬ್ರೈಲ್ ಲಿಪಿಯನ್ನು ಕಲಿತರು. ವಿಶ್ವವಿದ್ಯಾಲಯದಿಂದ ಕಲೆ ಪ್ರದರ್ಶನದಲ್ಲಿ ಪದವಿ ಪಡೆದ ಮೊದಲ ಕಿವುಡ ಮತ್ತು ಕುರುಡು ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಇದೆಲ್ಲ ಸಾಧ್ಯವಾಗಿದ್ದು ಅವರ ನಿರಂತರ ಪರಿಶ್ರಮ ಮತ್ತು ಅಪ್ರತಿಮ ಧೈರ್ಯದಿಂದ.




### ಧೈರ್ಯದ ಹಾದಿ

ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿದೆ ಇಲ್ಲವೇ ಫೇಲ್ ಆಗುತ್ತೇನೆ ಎಂಬ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಳ್ಳುವುದು ಹೇಡಿಗಳ ಲಕ್ಷಣ. ಇದಕ್ಕೆ ವಿರುದ್ಧವಾಗಿ ಕೆಲವರು ಎಂಥ ಸಮಸ್ಯೆ ಬಂದರೂ ಒಂಚೂರು ಹೆದರಿಕೊಳ್ಳದೇ ಮುಖದಲ್ಲಿ ಮಂದಹಾಸ ಬೀರುತ್ತಾರೆ. 'ನಾನು ಧೈರ್ಯದಿಂದ ಎದುರಿಸುತ್ತೇನೆ.' ಎಂಬ ಗುಂಡಿಗೆಯನ್ನು ಹೊಂದಿರುತ್ತಾರೆ. ಇನ್ನು ಕೆಲವರು ತಮ್ಮಲ್ಲಿರುವ ವಿಶೇಷ ಗುಣಗಳಿಂದಲೇ ಧೈರ್ಯವನ್ನು ಒಗ್ಗೂಡಿಸಿಕೊಳ್ಳುತ್ತಾರೆ. ನಮ್ಮಲ್ಲಿ ಅನೇಕರಿಗೆ ಧೈರ್ಯ ಎಂಬುದು ಕೇವಲ ಯುದ್ಧಭೂಮಿ ಇಲ್ಲವೇ ರಾಜನಿಗೆ, ವೀರ ಸೈನಿಕರಿಗೆ ಮಾತ್ರ ಸೀಮಿತವಾದುದು ಎಂಬ ತಪ್ಪು ಕಲ್ಪನೆಯಿದೆ. ಆದರೆ ಅದು ದೈನಂದಿನ ಜೀವನದಲ್ಲಿ ನಾವು ತೆಗೆದುಕೊಳ್ಳುವ ಸಣ್ಣ ನಿರ್ಧಾರಗಳ ಮೂಲಕವೂ ಧೈರ್ಯ ವ್ಯಕ್ತವಾಗುತ್ತದೆ. ಪರೀಕ್ಷೆಯಲ್ಲಿ ನಕಲು ಮಾಡಿ ಸುಲಭವಾಗಿ ಪಾಸಾಗುವ ಅವಕಾಶವಿದ್ದರೂ ಫೇಲಾದರೂ ಪರವಾಗಿಲ್ಲ ಪ್ರಾಮಾಣಿಕತೆಯಿಂದ ಬರೆಯುತ್ತೇನೆ ಎಂಬುದು ಧೈರ್ಯದ ಹಾದಿಯೇ ಸರಿ. ನಮ್ಮಿಂದ ತಪ್ಪಾದಾಗ ಬೇರೆಯವರನ್ನು ದೂಷಿಸದೇ ಹೌದು ನನ್ನಿಂದ ತಪ್ಪಾಗಿದೆ ಎಂದು ಒಪ್ಪಿಕೊಳ್ಳುವುದು ಸಹ ಧೈರ್ಯವೇ. ಧೈರ್ಯ ಎಂಬುದು ಹುಟ್ಟಿನಿಂದ ಬರುವ ಗುಣವಲ್ಲ. ಬದಲಿಗೆ ಅದನ್ನು ನಿತ್ಯ ಜೀವನದಲ್ಲಿ ಅಭ್ಯಾಸ ಮಾಡಿಕೊಳ್ಳಬಹುದು.

ಹೆದರಿಕೆಯನ್ನು ಮೀರಿ, ಸವಾಲುಗಳನ್ನು ಸ್ವೀಕರಿಸಿ, ಜೀವನದಲ್ಲಿ ಯಶಸ್ಸು ಸಾಧಿಸಲು ಧೈರ್ಯ ಅತ್ಯಗತ್ಯ ನಿಮ್ಮಲ್ಲಿ ಧೈರ್ಯವನ್ನು ವೃದ್ಧಿಸಿಕೊಳ್ಳಲು ಭಯವನ್ನು ಎದುರಿಸಲು ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸಿಕೊಳ್ಳಲು ಕೆಲವು ಸರಳ ಹಾಗೂ ಪ್ರಾಯೋಗಿಕ ಮಾರ್ಗಗಳು ಇಲ್ಲಿವೆ.

### ಸ್ಫೂರ್ತಿ

ಧೈರ್ಯವೆಂದರೆ ಭಯ ಇಲ್ಲದಿರುವುದು ಅಲ್ಲ. ಬದಲಿಗೆ ಭಯವಿದ್ದರೂ ಅದನ್ನು ಮೀರಿ ಮುಂದುವ–ರಿಯುವುದು. ಯಾವುದರ ಭಯವಿದೆ ಎಂಬುದನ್ನು




ಸ್ಪಷ್ಟವಾಗಿ ಗುರುತಿಸಿ ಭಯದಿಂದ ದೂರ ಓಡುವುದನ್ನು ಬಿಟ್ಟು ಅವುಗಳನ್ನು ಧೈರ್ಯದಿಂದ ಎದುರಿಸುವ ಮನಸ್ಥಿತಿಯನ್ನು ಬೆಳಿಸಿಕೊಳ್ಳಬೇಕು. ಭಯವು ನಮ್ಮನ್ನು ಜೀವಂತವಾಗಿಯೇ ಸಾಯಿಸುತ್ತದೆ. ಆದ್ದ–ರಿಂದ ನಿಮ್ಮ ಸುತ್ತಲಿರುವ ಧೈರ್ಯಶಾಲಿ ವ್ಯಕ್ತಿಗಳನ್ನು ಗಮನಿಸಿ ಮತ್ತು ಅವರಿಂದ ಸ್ಫೂರ್ತಿ ಪಡೆಯಿರಿ. ನಿಮ್ಮ ಗುರಿಗಳನ್ನು ಸಾಧಿಸಲು ಶ್ರಮಿಸುತ್ತಿರುವವರ ಜೊತೆ ಒಡನಾಟ ಇಟ್ಟುಕೊಳ್ಳುವುದು ನಿಮ್ಮ ಮಾನಸಿಕ ಬಲವನ್ನು ಹೆಚ್ಚಿಸುತ್ತದೆ. ಅದು ನಿಮ್ಮಲ್ಲಿನ ಆತ್ಮಸ್ಥೈರ್ಯವನ್ನು ಗಟ್ಟಿಗೊಳಿಸುತ್ತದೆ. ಆತ್ಮವಿಶ್ವಾಸವನ್ನು ದ್ವಿಗುಣಗೊಳಿಸುತ್ತದೆ.

### ಅವಕಾಶಗಳೆಂದು ತಿಳಿ

ಸವಾಲುಗಳನ್ನು ಅಡೆತಡೆಗಳೆಂದು ನೋಡದೆ ಅವುಗಳನ್ನು ಕಲಿಯಲು ಮತ್ತು ಬೆಳೆಯಲು ಇರುವ ಅವಕಾಶಗಳೆಂದು ಭಾವಿಸಬೇಕು. ಆಗ ಹೆದರುವ ಹಿಂಜರಿಯುವ ಮನಸ್ಸಿಗೆ ತನ್ನಿಂದ ತಾನೆ ಧೈರ್ಯ ಬರುತ್ತದೆ. ಎಲ್ಲ ಸಂದರ್ಭದಲ್ಲೂ ನಮಗೆ ಅನುಕೂಲಕರ ಸನ್ನಿವೇಶಗಳಿರುವುದಿಲ್ಲ ಎಂಬುದನ್ನು ಮರೆಯಬಾರದು. ಅನಾನುಕೂಲತೆಯ ಬಗ್ಗೆ ಹೆಚ್ಚು ತಲೆ ಕೆಡಿಸಿಕೊಳ್ಳಬೇಕಿಲ್ಲ. ನಮಗೆ ಬೇಕಾದ ಅನುಕೂಲಕರ ವ್ಯವಸ್ಥೆಯನ್ನು ಮಾಡಿಕೊಳ್ಳುವುದನ್ನುಕಲಿಯಬೇಕು.ಹೊಸಸವಾಲುಗಳನ್ನು ತೆರೆದ ಎದೆಯಿಂದ ಸ್ವಾಗತಿಸಬೇಕು. ದೊಡ್ಡ ಸವಾಲುಗಳನ್ನು ಎದುರಿಸಲು ಒಮ್ಮೆಲೇ ಆಗುವುದಿಲ್ಲ. ಆದ್ದರಿಂದ ಸಣ್ಣ ಗು–ರಿಗಳನ್ನು ಇಟ್ಟುಕೊಂಡು ಅವುಗಳನ್ನು ಸಾಧಿಸುವತ್ತ ಚಿತ್ತ ಹರಿಸಬೇಕು. ಆ ಸಣ್ಣ ಗೆಲುವುಗಳು ನಿಮ್ಮಲ್ಲಿ ಧೈರ್ಯವನ್ನು ತುಂಬುತ್ತವೆ. ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ. ನೀವು ಮುಟ್ಟುವ ಪ್ರತಿಯೊಂದು ಹಂತವೂ ನಿಮ್ಮ ಧೈರ್ಯವನ್ನು ಇಮ್ಮಡಿಗೊಳಿಸುತ್ತದೆ. ಇತಿಹಾಸದಲ್ಲಿ ಅಳಿಸಲಾಗದ ಮುದ್ರೆ ಒತ್ತಿದ ಸಾಧಕರು ಸವಾಲುಗಳನ್ನು ಅವಕಾಶಗಳನ್ನಾಗಿ ಬಳಸಿಕೊಂಡವರೆ ಎಂಬುದನ್ನು ಮರೆಯುವಂತಿಲ್ಲ.

### ನಿಭಾಯಿಸುವ ಶಕ್ತಿ

ಜೀವನದಲ್ಲಿ ಎಲ್ಲ ಸಮಯದಲ್ಲೂ ಖುಷಿಯಾಗಿರಲು ಸಾಧ್ಯವಿಲ್ಲ. ಕೆಲ ಸಂದರ್ಭ ಸಮಸ್ಯೆಗಳು ಎದುರಾಗುತ್ತವೆ. ಅದಕ್ಕೆ ಧೃತಿಗೆಡದೇ ಧೈರ್ಯದಿಂದ ಎದುರಿಸಿದಾಗ ಯಶಸ್ಸು ಸಿಗುತ್ತದೆ. ಸಮಸ್ಯೆ ಎದುರಿಸಲಾಗದೇ ಹಿಂಜ–ರಿಯುವುದು ಜೀವನವನ್ನು ಮತ್ತಷ್ಟು ಕಠಿಣಗೊಳಿಸುತ್ತದೆ.



ಮಾನಸಿಕವಾಗಿ ಧೈರ್ಯವಂತರಾಗಿರುವವರು ಯಾವುದೇ ಸಮಸ್ಯೆಗಳನ್ನು ನಿರಾಯಾಸವಾಗಿ ನಿಭಾಯಿಸುವ ಶಕ್ತಿಯನ್ನು ಪ್ರದರ್ಶಿಸುತ್ತಾರೆ. 'ನಿಮ್ಮನ್ನು ನೀವು ದುರ್ಬಲರು ಎಂದು ಭಾವಿಸುವುದೇ ದೊಡ್ಡ ಪಾಪ.' ಎಂದಿದ್ದಾರೆ ಸ್ವಾಮೀ ವಿವೇಕಾನಂದರು. 'ಕಷ್ಟಗಳಿಗೆ ಹೆದರಿ ಹಿಮ್ಮೆಟ್ಟುವವರಿಗೆ ಅಬ್ದುಲ್ ಕಲಾಂ ಅವರು ಹೀಗೆ ಹೇಳಿದ್ದಾರೆ..'ಕಷ್ಟಗಳು ನಿಮ್ಮನ್ನು ನಾಶಮಾಡಲು ಬರುವುದಿಲ್ಲ, ಬದಲಿಗೆ ನಿಮ್ಮಲ್ಲಿರುವ ಅಡಗಿರುವ ಶಕ್ತಿಯನ್ನು ಹೊರತರಲು ಬರುತ್ತವೆ.' ಎಂಬ ಸೂಕ್ತ ಸೂಕ್ತಿಯನ್ನು ಸದಾ ನೆನಪಿನಲ್ಲಿಡಬೇಕು. ಕಷ್ಟವೆಂದು ದೂರುತ್ತ ಕುಳಿತುಕೊಳ್ಳದೇ ಅದನ್ನು ಹಿಮ್ಮೆಟ್ಟುವುದು ಹೇಗೆ ಎಂದು ಯೋಚಿಸಬೇಕು. ನಿಮ್ಮ ಆಲೋಚನೆಗಳು ಪ್ರತಿಕ್ರಿಯೆಗಳು ಭಾವನೆಗಳ ಬಗ್ಗೆ ತಿಳಿಯಬೇಕು. ಮತ್ತು ಸಾವಧಾನತೆಯನ್ನು ಅಭ್ಯಸಿಸಬೇಕು.

### ಇಚ್ಛಾಶಕ್ತಿ

ದೊಡ್ಡ ದೊಡ್ಡ ಕನಸುಗಳನ್ನು ಕಾಣುವುದು ಸುಲಭ. ಆದರೆ ಅವುಗಳನ್ನು ನನಸಾಗಿಸುವ ಹಾದಿಯಲ್ಲಿ ಬರುವ ಕಷ್ಟಗಳನ್ನು ಎದುರಿಸುವುದು ತುಂಬಾ ಕಠಿಣ.. ಬಹಳ ಜನ ನನ್ನಲ್ಲಿ ಶಕ್ತಿಯಿಲ್ಲ ಎಂದು ಕೊರಗುತ್ತಾರೆ. ಆದರೆ 'ಶಕ್ತಿ ಎನ್ನುವುದು ದೈಹಿಕ ಸಾಮರ್ಥ್ಯದಿಂದ ಬರುವುದಿಲ್ಲ, ಅದು ಅದಮ್ಯ ಇಚ್ಛಾಶಕ್ತಿಯಿಂದ ಬರುತ್ತದೆ.' ಹೊರಗಿನಿಂದ ಎಷ್ಟೇ ಬಲಶಾಲಿಯಾಗಿದ್ದರೂ ಮನಸ್ಸಿನಲ್ಲಿ ಧೈರ್ಯ ಮತ್ತು ಇಚ್ಛಾಶಕ್ತಿ ಇಲ್ಲದಿದ್ದರೆ ಯಾವ ಕೆಲಸವೂ ಸಲೀಸಾಗುವುದಿಲ್ಲ. ಧೈರ್ಯ ಎನ್ನುವುದು ಯಾರೋ ಕೆಲವರಿಗೆ ಮಾತ್ರಸೀಮಿತವಾದ ಗುಣವಲ್ಲ. ಕುವೆಂಪು ಅವರ



ವಾಣಿಯೊಂದು ಹೀಗಿದೆ. 'ನಿನ್ನನ್ನು ನೀನು ನಂಬದಿದ್ದರೆ ಜಗತ್ತಿನಲ್ಲಿ ಬೇರೆ ಯಾರು ನಿನ್ನನ್ನು ನಂಬಲಾರರು.' ಇಚ್ಛಾಶಕ್ತಿ ಇದ್ದರೆ ಯಾವುದೇ ದೌರ್ಬಲ್ಯವು ತಡೆಯಲು ಸಾಧ್ಯವಿಲ್ಲ. ಇಚ್ಛಾಶಕ್ತಿಯು ಎಂಥ ದೌರ್ಬಲ್ಯಗಳನ್ನು ಇಲ್ಲವಾಗಿಸಬಲ್ಲದು. ಅದು ಮನುಷ್ಯನನ್ನು ಶೂನ್ಯದಿಂದ ಶಿಖರಕ್ಕೆ ಕರೆದೊಯ್ಯುವ ಶಕ್ತಿ.

### ನಿರ್ಧರಿಸಿ

ಸೋಲು ಗೆಲುವು ಇದ್ದದ್ದೇ. ಸೋತಾಗ ಕುಗ್ಗುವುದು ಗೆದ್ದಾಗ ಹಿಗ್ಗುವವರ ಕೈಯಲ್ಲಿ ಏನೂ ಸಾಧಿಸಲು ಸಾಧ್ಯವಿಲ್ಲ. ಸೋಲನ್ನು ಸವಾಲಾಗಿ ಸ್ವೀಕರಿಸಿ ಛಲದಿಂದ ಗುರಿ ಮುಟ್ಟಲು ಶ್ರಮಿಸಿದರೆ ಯಶಸ್ಸು ತಾನೇ ಹುಡುಕಿಕೊಂಡು ಬರುತ್ತದೆ. ನಿರಂತರ ಅಭ್ಯಾಸ ಮತ್ತು ಸಕಾರಾತ್ಮಕ ಚಿಂತನೆಯಿಂದ ನೀವು ಖಂಡಿತವಾಗಿಯೂ ಧೈರ್ಯವನ್ನು ಗಳಿಸಬಲ್ಲಿರಿ. ಜೀವನದಲ್ಲಿ ಬಿದ್ದ ಜಾಗದಲ್ಲೇ ಎದ್ದು ಬರುವಂತಹ ಛಲವನ್ನು ಬೆಳೆಸಿಕೊಳ್ಳಬೇಕು. ಯಾವುದೇ ಕಷ್ಟದ ಸಂದರ್ಭ ಬಂದರೂ ಅದರಿಂದ ತಪ್ಪಿಸಿಕೊಳ್ಳಲು ನೋಡದೇ ಅದನ್ನು ಅರಿತುಕೊಂಡು ಸ್ವಂತ ನಿರ್ಧಾರ ತೆಗೆದುಕೊಳ್ಳಲು ಪ್ರಯತ್ನಿಸಬೇಕು. ಸ್ವಂತ ನಿರ್ಧಾರ ತೆಗೆದುಕೊಳ್ಳುವ ಸಾಮರ್ಥ್ಯವು ನಿಮ್ಮಲ್ಲಿ ಸ್ವಾಭಿಮಾನವನ್ನು ಮತ್ತು ಧೈರ್ಯವನ್ನು ಹೆಚ್ಚಿಸಿಕೊಳ್ಳಬಹುದು.

### ಕೊನೆ ಮಾತು

ಯಾವುದೇ ಹೊಸ ಕೆಲಸವನ್ನು ಆರಂಭಿಸುವಾಗ ಧೈರ್ಯ ಸಾಲುವುದಿಲ್ಲ. ಹಾಗಂತ ಪ್ರಯತ್ನಿಸುವುದನ್ನು ಬಿಟ್ಟುಬಿಡುವುದು ತಪ್ಪು. ಗುರಿಯ ಅರ್ಧ ವಿಜಯವು ಧೈರ್ಯದ ನಿರ್ಧಾರದಲ್ಲಿ ಅಡಗಿರುತ್ತದೆ. ಆರಂಭದಲ್ಲೇ ಹಿಂದೇಟು ಹಾಕಿದರೆ ಸೋಲು ನಿಶ್ಚಿತ. ಬದುಕಿನ ಸವಾಲುಗಳನ್ನು ಎದುರಿಸುತ್ತ ಹೋದಂತೆ ಧೈರ್ಯ ಬರುವುದು ಖಚಿತ. ಧೈರ್ಯದಿಂದ ಮುನ್ನುಗ್ಗಿದರೆ ಗೆಲುವು ಸುಲಭ. ಎದೆಯಲ್ಲಿ ಧೈರ್ಯದ ಕಿಡಿಯಿದ್ದರೆ ಜಯದ ಹಾದಿಯು ನಿಮ್ಮನ್ನು ತೆರೆದ ತೋಳಿನಿಂದ ಸ್ವಾಗತಿಸುತ್ತದೆ.


ಲೇಖನ
– ಜಯಶ್ರೀ.ಜೆ. ಅಬ್ಬಿಗೇರಿ.
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಕಾಲುವೆಗಳಿಗೆ ನೀರು ಹರಿಸಲು ಆಗ್ರಹಿಸಿ ನಡೆದ ರೈತರ ಹೋರಾಟ ಯಶಸ್ವಿ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ತಾಲೂಕಿನ ಮಟ್ಟಿಹಾಳ ಕ್ರಾಸ್‌ನಲ್ಲಿರುವ ಮುಳವಾಡ ಏತ ನೀರಾವರಿಯ ಕಾರ್ಯಾಲಯಗಳ ಮುಂದೆ ಏತನೀರಾವರಿ ಯೋಜನೆಯ ಮೂಲಕ ಕಾಲುವೆಗಳಿಗೆ ಕೃಷ್ಣಾ ನದಿ ನೀರನ್ನು ಹರಿಸಬೇಕೆಂದು ಆಗ್ರಹಿಸಿ ಅವಳಿ ಜಿಲ್ಲೆಯ ರೈತರು ಮಾಜಿ ಸಚಿವ ಎಸ್. ಕೆ. ಬೆಳ್ಳುಬ್ಬಿ ಅವರ ನೇತೃತ್ವದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಹೋರಾಟ ಯಶಸ್ವಿಯಾಯಿತು.



ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆಯು ಅವಳಿ ಜಿಲ್ಲೆಯಲ್ಲಿ ಸಮರ್ಪಕವಾಗಿ ಮಳೆ ಪ್ರಮಾಣ ಅಧಿಕವಾಗದೇ ಇರುವದನ್ನು ಗಮನಿಸಿ ರೈತರು ಸಂಕಷ್ಟಕ್ಕೆ ಸಿಲುಕುತ್ತಾರೆ ಎನ್ನುವ ಮುಂದಾಲೋಚನೆಯಿಂದ ಕಳೆದ ಒಂದು ವಾರದ ಹಿಂದೆ ಜುಲೈ 14 ರೊಳಗಾಗಿ ಆಲಮಟ್ಟಿ ಆಣೆಕಟ್ಟಿನ ಹಿನ್ನೀರಿನಲ್ಲಿ ಬರುವ ಎಡದಂಡೆ ಮತ್ತು ಬಲದಂಡೆ ಕಾಲುವೆ ಮುಳವಾಡ ಏತ ನೀರಾವರಿಯ ಮೂರು ಹಂತದ ಕಾಲುವೆಗಳಲ್ಲಿ ಕೃಷ್ಣೆಯು ತುಂಬಿ ಹರಿಯುತ್ತಿರುವದರಿಂದ ಜನ ಜಾನುವಾರುಗಳಿಗೆ ರೈತರಿಗೆ ಅನುಕೂಲವಾಗಲು ನೀರನ್ನು ಬಿಡಬೇಕೆಂದು ಕರೆಕೊಟ್ಟಿದ್ದರು.

ಆದರೆ 14 ರೊಳಗಾಗಿ ಸರಕಾರ ನೀರು ಬಿಡಲು ಹಿಂದೇಟು ಹಾಕಿದ ಪ್ರಯುಕ್ತ ಸಾವಿರಾರು ರೈತರೊಂದಿಗೆ ಮಟ್ಟಿಹಾಳ ಕ್ರಾಸ್‌ನಲ್ಲಿ ಸಭೆ ಸೇರಿದಾಗ ಸಭೆಯ ಉದ್ದೇಶವನ್ನು ಅರಿತ ಅಧಿಕಾರಿಗಳು ಮೇಲಾಧಿಕಾರಿಗಳ ಗಮನಕ್ಕೆ ತಂದು ಸರಕಾರದಿಂದ ಒಪ್ಪಿಗೆ ಪಡೆದು ಬಳೂತಿ ಜಾಕ್‌ವೆಲ್‌ನಿಂದ ಎರಡು ಪಂಪ್‌ಗಳ ಮೂಲಕ ಕಾಲುವೆಗೆ ನೀರನ್ನು ಹರಿಸಿದರು. ಅದರಂತೆ ಎಲ್ಲ ಕಾಲುವೆಗಳ ಮೂಲಕ ನೀರು ಬಿಡಲು ಸರಕಾರ ಸಮ್ಮತಿಯನ್ನು ಸೂಚಿಸಿದ್ದು ಸಂತಸದಾಯಕವಾದ ವಿಷಯವಾಗಿದೆ ಎಂದು ರೈತರು ಬೆಳ್ಳುಬ್ಬಿಯವರ ನೇತೃತ್ವದಲ್ಲಿ ನೀರು ಹರಿಯುವ ಕಾಲುವೆಗೆ ತೆರಳಿ ಗಂಗಾಮಾತೆಗೆ ಪೂಜೆ ಸಲ್ಲಿಸಿದರು.


ಕೃಷ್ಣಾ ನದಿಗೆ ತಡವಾಗಿ ನೀರು ಬಂದರೂ ಕಾಲುವೆಗೆ ನೀರು ಬಾರದೇ ಇರುವದು ರೈತರಲ್ಲಿ ಆತಂಕ ಮೂಡಿಸಿತ್ತು ಬೆಳೆದ ಬೆಳೆಗಳಿಗೆ ನೀರು ಇಲ್ಲದೇ ಇತ್ತ ಮಳೆಯೂ ಇಲ್ಲದೇ ಬೆಳೆಗಳು ಒಣಗುವ ಹಂತಕ್ಕೆ ಬಂದರೆ ಬಿತ್ತನೆ ಮಾಡಲು ಹದವಾದ ಭೂಮಿಗೆ ಮುಂದಾದ ರೈತರಿಗೆ ಕಾಲುವೆಯ ನೀರು ಆಸರೆಯಾಗಿತ್ತು. ಅಲ್ಲದೇ ಕುಡಿಯುವ ನೀರಿಗೂ ತೊಂದರೆ ಉಂಟಾಗುವದನ್ನು ಗಮನಿಸಿ ಭುಮಿ ಕಳೆದುಕೊಂಡ ರೈತರಿಗೆ ಅನ್ಯಾಯವಾಗುವದನ್ನು ತಪ್ಪಿಸಲು ಸ್ವತಃ ರೈತರಾದ ಎಸ್.ಕೆ. ಬೆಳ್ಳುಬ್ಬಿಯವರು ಮುಂದಾಳತ್ವ ವಹಿಸಿ ಕಾಲುವೆಗಳಿಗೆ ನೀರು ಬರುವಂತೆ ಮಾಡಿರುವದಕ್ಕೆ ರೈತರ ಮೊಗದಲ್ಲಿ ಮಂದಹಾಸ ಮೂಡಿತು.

ಉನ್ನತ ಮಟ್ಟದ ಅಧಿಕಾರಿಗಳು ಸರಕಾರ ಕಾಲುವೆಗಳಿಗೆ ನೀರು ಬಿಡಲು ಸಮ್ಮತಿ ಸೂಚಿಸಿ ಬಿಡುವ ನಿರ್ಧಾರ ಕೈಗೊಂಡಿರುವದಕ್ಕೆ ಎಸ್.ಕೆ. ಬೆಳ್ಳುಬ್ಬಿಯವರು ಸ್ವಾಗತಿಸಿದರು. ನೀರು ನಿರ್ವಹಣಾ ಸಲಹಾ ಸಮೀತಿಯ ಒಪ್ಪಿಗೆಯನ್ನು ಪಡೆದು ಕಾಲುವೆಗಳಿಗೆ ನೀರು ಹರಿಸುವ ನಿರ್ಧಾರದಿಂದ ಸರಕಾರ ಹಿಂದೆ ಸರಿಯಬೇಕು ಏಕೆಂದರೆ ಸಂತ್ರಸ್ತರ ತ್ಯಾಗದ ಪರಿಣಾಮವಾಗಿ ಭೂಮಿ ಕಳೆದುಕೊಂಡ ರೈತರ ವರದಾನದಿಂದ

**ಅವಳಿ ಜಿಲ್ಲೆಯ ರೈತರು ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಅವರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಹೋರಾಟ**

ಆಣೆಕಟ್ಟು ನೆಲೆ ನಿಂತಿದ್ದು ಇದಕ್ಕೆ ಈ ಭಾಗದ ರೈತರ ನಿರ್ಣಯ ಕೈಗೊಳ್ಳುವಂತಹ ಆದೇಶವಾಗಬೇಕು ನಿರ್ವಹಣಾ ಸಮೀತಿಯನ್ನು ಹೊರಗಿಟ್ಟಾಗ ಮಾತ್ರ ಅವಳಿ ಜಿಲ್ಲೆಯ ರೈತರಿಗೆ ಅನುಕೂಲವಾಗುವದು. ಇಲ್ಲದಿದ್ದರೆ ಸರಕಾರ ಯಾವಾಗ ನೀರು ಬಿಡುತ್ತದೆ ಎನ್ನುವದನ್ನು ಜಾತಕ ಪಕ್ಷಿಯಂತೆ ಕಾಯಬೇಕಾಗುತ್ತದೆ ಎಂದು ಮಾಜಿ ಸಚಿವ ಎಸ್. ಕೆ. ಬೆಳ್ಳುಬ್ಬಿ ಹೇಳಿದರು.

ಈ ಸಂದರ್ಭದಲ್ಲಿ ಆಸಂಗಿಯ ಜಗದೀಶ ಹಿರೇಮಠ, ಕೊಲ್ಹಾರದ ದಿಗಂಬರೇಶ್ವರ ಸಂಸ್ಥಾನ ಮಠದ ಕಲ್ಲಿನಾಥ ದೇವರು, ಶೀಲವಂತಹಿರೇಮಠದ ಕೈಲಾಸನಾಥ ಶ್ರೀಗಳು, ಬಿಜೆಪಿ ಜಿಲ್ಲಾಧ್ಯಕ್ಷ ಗುರಲಿಂಗಪ್ಪ ಅಂಗಡಿ, ಬಸವನ ಬಾಗೇವಾಡಿ ಮಂಡಲ ಅಧ್ಯಕ್ಷ ಸಿದ್ದರಾಮ ಕಾಖಂಡಕಿ, ಮಲ್ಲಿಕಾರ್ಜುನ ಬಿರಾದಾರ, ಶ್ರೀಶೈಲ ಓಡಗಲ್, ಸಂಗು ಪೂಜಾರಿ, ಜಿಲ್ಲಾ ನ್ಯಾಯವಾಧಿಗಳ ಸಂಘದ ಅಧ್ಯಕ್ಷ ಎ.ಟಿ. ಬಿರಾದಾರ, ಸಗರೆಪ್ಪ ಮುರನಾಳ, ಟಿ.ಟಿ. ಹಗೇದಾಳ, ಹಣಮಂತ ಕುಬಕಡ್ಡಿ, ಬಸವರಾಜ ಬಾಗೇವಾಡಿ, ಮುತ್ತು ಕಾಜಗಾರ, ರಾಜೇಶ್ವರಿ ಆಸಂಗಿ, ನಾಗರದಿನ್ನಿ, ಬಳೂತಿ, ಮಟ್ಟಿಹಾಳ, ಕೊಲ್ಹಾರ ಸುತ್ತಮುತ್ತಲಿನ ಗ್ರಾಮಗಳ ರೈತಮುಖಂಡರು ಭಾಗವಹಿಸಿದ್ದರು.




## ಗಾನಕೋಗಿಲೆ ಎಸ್. ಜಾನಕಿಗೆ ಭಾವಪೂರ್ಣ ನುಡಿ ನಮನ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸರ್ವಕಾಲಕ್ಕೂ ವಿಶ್ವ ಸಂಗೀತ ಇತಿಹಾಸದಲ್ಲಿ ಅಜರಾಮರವಾಗಿ ನಿಲ್ಲುವಂತಹ ಗಾಯಕಿ ಗಾನಕೋಗಿಲೆ ಎಸ್.ಜಾನಕಿ ಕಂಠ ಮಾಧುರ್ಯಕ್ಕೆ ಎಂತಹವರನ್ನು ಮಂತ್ರಮುಗ್ಧರನ್ನಾಗಿ ಮಾಡುವಂತಹ ಶಕ್ತಿ ಇದೆ. ಅವರು ದೈಹಿಕವಾಗಿ ದೂರವಾಗಿರಬಹುದು. ಆದರೆ ಅವರ ಗಾಯನ ಪ್ರತಿನಿತ್ಯ ಎಲ್ಲರ ಮನಸ್ಸಿನಲ್ಲೂ ಮಿಗುನುಗುತ್ತಿರುತ್ತವೆ ಎಂದು ತಾಪಂ ಇಒ ರಾಮು ಅಗ್ನಿ ಹೇಳಿದರು.

ಸಿಂದಗಿ ನಗರದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಎಸ್.ಜಾನಕಿ ಅವರ ನುಡಿ ನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಭಾರತ ಸೇರಿದಂತೆ ವಿಶ್ವ ಕಂಡ ಈ ಶತಮಾನದ ಶ್ರೇಷ್ಠ ಗಾಯಕಿಯರಲ್ಲಿ ಎಸ್. ಜಾನಕಿ ಅಗ್ರಸ್ಥಾನದಲ್ಲಿದ್ದಾರೆ. ಸುಮಾರು 16ಕ್ಕೂ ಅಧಿಕ ಭಾಷೆಗಳಲ್ಲಿ 48 ಸಾವಿರಕ್ಕೂ ಹೆಚ್ಚು ಹಾಡುಗಳನ್ನು ಹಾಡಿರುವ ಅವರು, ಲತಾ ಮಂಗೇಶ್ಕರ್ ಅವರ ನಂತರ ವಿವಿಧ ಭಾಷೆಗಳಲ್ಲಿ ಅತಿ ಹೆಚ್ಚು ಹಾಡುಗಳನ್ನು ಹಾಡಿದ ಅಪರೂಪದ ಗಾಯಕಿಂಯಾಗಿ ಗುರುತಿಸಿಕೊಂಡಿದ್ದಾರೆ ಎಂದರು. ಈ ವೇಳೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಹಾಸಿಂಪೀರ್ ವಾಲಿಕಾರ, ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಆನಂದ ಶಾಬಾದಿ ಹಾಗೂ ಸಾಹಿತಿ ಎಸ್.ಎಸ್.ಸಾತಿಹಾಳ ಮಾತನಾಡಿದರು. ಇದೇ ಸಮಯದಲ್ಲಿ ತಾಲೂಕು ಕಸಾಪ ಅಧ್ಯಕ್ಷ ವಾಯ್.ಸಿ.ಮಯೂರ ಪ್ರಾಸ್ತಾವಿಕ ಮಾತನಾಡಿದರು.

ಸಾಹಿತಿ ಶಾಂತ ಮೌಸಲಗಿ ಕವಿತೆ ವಾಚಿಸಿದರು. ಶಿಕ್ಷಕಿ ಶೈನಾಭಿ ಮಸಳಿ ಹಾಗೂ ಡಾ.ಪ್ರಕಾಶ ರಾಗರಂಜನಿ ಎಸ್.ಜಾನಕಿ ಅವರ ಗೀತೆಗಳನ್ನು ಹಾಡುವ ಮೂಲಕ ಭಾವಪೂರ್ಣ ನುಡಿ ನಮನ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ರಾಜಶೇಖರ ನರಗೋದಿ, ಸುನಂದಾ ಯಂಪುರೆ, ಅನುಸೂಯ ಪಾರಗೊಂಡ, ವರ್ಷಾ ಪಾಟೀಲ, ಶಾಂತು ರಾಣಾಗೋಳ, ಎಸ್.ಜಿ.ಪಾಟೀಲ, ಶಿವಕುಮಾರ ಶಿವಶಂಪಿಗೇರ, ಎಂ.ಆರ್.ಡೋಣಿ, ಜೈ ಭೀಮ್ ತಳಕೇರಿ ಸೇರಿದಂತೆ ಇತರರು ಇದ್ದರು.

# 4 ತಿಂಗಳಿಂದ ಮುಗಿಯದ ದೇವಣಗಾಂವ ಸೇತುವೆ ದುರಸ್ತಿ

## ಲಾರಿ ಸೇರಿದಂತೆ ಎಲ್ಲ ದೊಡ್ಡ ವಾಹನಗಳು ಸಂಚರಿಸುತ್ತಿವೆಯಾದರೂ ಬಸ್ ಸಂಚಾರವಿಲ್ಲ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ವಿಜಯಪುರ ಜಿಲ್ಲೆಯ ಆಲಮೇಲ ತಾಲೂಕಿನ ದೇವಣಗಾಂವ ಗ್ರಾಮದ ಹತ್ತಿರ ಭೀಮಾ ನದಿಗೆ ಅಡ್ಡಲಾಗಿ ಕಟ್ಟಿರುವ ಸೇತುವೆಯ ದುರಸ್ತಿ ಸಲುವಾಗಿ ರಸ್ತೆ ಸಂಚಾರ ಸ್ಥಗಿತಗೊಳಿಸಿರುವುದರಿಂದ ಕಳೆದ ನಾಲ್ಕು ತಿಂಗಳಿಂದ ಸಾರಿಗೆ ಸಂಸ್ಥೆಯ ಬಸ್ ಸಂಚಾರವಿಲ್ಲದೆ ಪ್ರಯಾಣಿಕರು ತೊಂದರೆ ಅನುಭವಿಸುವಂತಾಗಿದೆ.

ವಿಜಯಪುರ ಕಲಬುರಗಿ ಜಿಲ್ಲೆಗಳಿಗೆ ಸಂಪರ್ಕ ಕೊಂಡಿಯಾಗಿರುವ, ಔರಾದ ಸದಾಶಿವಘಡ ರಾಜ್ಯ ಹೆದ್ದಾರಿ 34, ಅದರಲ್ಲಿ ಬರುವ ಈ ಸೇತುವೆಯ ಮೇಲ್ಭಾಗ ಕಿತ್ತು ಹೋಗಿ ಪ್ರಯಾಣಕ್ಕೆ ಸಂಚಕಾರ ಎದುರಾಗಿತ್ತು.

ಆದ್ದರಿಂದ ಕಳೆದ ಎಪ್ರಿಲ್ 23 ರಿಂದ ಎರಡು ತಿಂಗಳುಗಳ ಕಾಲ ಸೇತುವೆ ದುರಸ್ತಿ ಮಾಡುವ ಸಲುವಾಗಿ ಸಾರಿಗೆ ಸಂಸ್ಥೆಯ ಬಸ್ ಸೇರಿದಂತೆ ಎಲ್ಲಾ ವಾಹನಗಳ ಸಂಚಾರ ನಿರ್ಬಂಧಿಸಿಲಾಗಿತ್ತು.

ಸದ್ಯ ದ್ವಿಚಕ್ರ ಹಾಗೂ ಸಣ್ಣ ವಾಹನಗಳನ್ನು ಸೇತುವೆ ಮೇಲೆ ಸಂಚರಿಸಲು ವ್ಯವಸ್ಥೆ ಮಾಡಲಾಗಿದೆ ಹಾಗೂ ದೊಡ್ಡ ದೊಡ್ಡ ಲಾರಿಗಳು ಕೂಡ ಸಂಚರಿಸುತ್ತಿವೆ, ಆದರೆ ಸಾರಿಗೆ ಸಂಸ್ಥೆಯ ಬಸ್ ಸಂಚಾರ ಮಾತ್ರ ಇನ್ನೂ ಪ್ರಾರಂಭವಾಗಿಲ್ಲ. ಇದರಿಂದ ನಿತ್ಯ ಸಂಚರಿಸುವ ವಿದ್ಯಾರ್ಥಿಗಳಿಗೆ ಮಹಿಳೆಯರಿಗೆ ಸರಕಾರಿ ನೌಕರರಿಗೆ ಸಣ್ಣಪುಟ್ಟ ಕೂಲಿ ಕಾರ್ಮಿಕರಿಗೆ ತೊಂದರೆ ಎದುರಾಗಿದೆ.

ಕೇವಲ ಎರಡು ತಿಂಗಳಲ್ಲಿ ಸೇತುವೆಯ ದುರಸ್ತಿ ಮಾಡಿ ಕೊಡುವುದಾಗಿ ಅಧಿಕಾರಿಗಳು ತಿಳಿಸಿದ್ದರು, ಆದರೆ ನಾಲ್ಕು ತಿಂಗಳು ಕಳೆಯುತ್ತಾ ಬಂದರೂ ಕೂಡ ಸೇತುವೆ ದುರಸ್ತಿ ಇನ್ನೂ ಪೂರ್ಣಗೊಂಡಿಲ್ಲ.

ಸೇತುವೆಯ ಮೇಲ್ಭಾಗದಲ್ಲಿ ಸಿಮೆಂಟ್ ರಸ್ತೆಯನ್ನು ಕೇವಲ 15 ದಿನಗಳಲ್ಲಿ ಪೂರ್ಣಗೊಳಿಸಿದ್ದು, ಎರಡು ಭಾಗದ ತಡೆಗೋಡೆಗಳ ನಿರ್ಮಾಣ ಕಾರ್ಯ ವಿಳಂಬವಾಗುತ್ತಿದೆ, ಇಂಥ ದೊಡ್ಡ ಸೇತುವೆಯ ತಡೆಗೋಡೆ ಕಾರ್ಯದಲ್ಲಿ ಕೇವಲ 3-4 ಜನ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಹೀಗಾದರೆ ಸೇತುವೆಯ ದುರಸ್ತಿ ಪೂರ್ಣಗೊಳ್ಳೋದು ಹೇಗೆ ಸಾಧ್ಯ ಎನ್ನುತ್ತಾರೆ ಪ್ರಯಾಣಿಕರು. ಪ್ರತಿನಿತ್ಯ ಸಿಂದಗಿಯಿಂದ ಅಫಜಲಪುರ ತಾಲೂಕಿಗೆ, ಅಪಜಲಪುರ ತಾಲೂಕಿನಿಂದ ಸಿಂದಗಿ, ಇಂಡಿ, ಆಲಮೇಲ ಭಾಗಕ್ಕೆ ಅನೇಕ ಜನ ನೌಕರರು, ವಿದ್ಯಾರ್ಥಿಗಳು, ವ್ಯಾಪಾರಸ್ಥರು, ಕೂಲಿ ಕಾರ್ಮಿಕರು ಸಂಚರಿಸುವುದರಿಂದ ಅವರಿಗೆ ತುಂಬಾ ತೊಂದರೆಯಾಗುತ್ತಿದೆ.

ಹೀಗಾಗಿ ಗುತ್ತಿಗೆದಾರರು ಹೆಚ್ಚಿನ ಕಾರ್ಮಿಕರನ್ನು ನಿಯೋಜಿಸಿ ಕೆಲಸ ಪೂರ್ಣಗೊಳಿಸುವಲ್ಲಿ ಮುತುವರ್ಜಿ ವಹಿಸಿ ಜನಸಾಮಾನ್ಯರ ಕಷ್ಟವನ್ನು ಅರಿತುಕೊಳ್ಳುವ ಅಗತ್ಯ ಇದೆ.

ಈ ಕುರಿತು ಲೋಕೋಪಯೋಗಿ ಇಲಾಖೆಯು ಆದಷ್ಟು ಬೇಗನೆ ಸೇತುವೆ ದುರಸ್ತಿ ಮಾಡಿ ಜನರ ಕಷ್ಟಕ್ಕೆ ಸ್ಪಂದಿಸಬೇಕಿದೆ.

## ಟೌನ್ ಶಿಪ್ ಯೋಜನೆ ರದ್ದುಗೊಳ್ಳುವರೆಗೂ ವಿಧಾನಸೌಧದೊಳಗೆ ಧರಣಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬಿಡದಿ ಟೌನ್ ಶಿಪ್ ಯೋಜನೆ ವಿರುದ್ಧ ಮಣ್ಣಿನ ಮಗ ಮಾಜಿ ಪ್ರಧಾನಿಗಳಾದ ದೇವೇಗೌಡರು ವಿಧಾನ ಸೌಧದಲ್ಲಿ ಧರಣಿ ಕೂರುವುದಾಗಿ ಘೋಷಿಸಿದ್ದು, ಅವರ ಈ ನಿಲುವಿಗೆ ನನ್ನ ಸಂಪೂರ್ಣ ಬೆಂಬಲವಿದೆ. ಟೌನ್ ಶಿಪ್ ಯೋಜನೆ ರದ್ದುಗೊಳಿಸುವವರೆಗೂ ನಾನೂ ಸಹ ವಿಧಾನಸೌಧದೊಳಗೆ ಧರಣಿ ಕೂರುವುದಾಗಿ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳರು ಘೋಷಿಸಿದ್ದಾರೆ.

ಸಮೃದ್ಧವಾದ ಬಾಳೆ, ತೆಂಗು, ಅಡಕೆ, ತರಕಾರಿ ಸೇರಿದಂತೆ ಹಲವು ಬಗೆಯ ಬೆಳೆಗಳನ್ನು ಬೆಳೆಯುವ ಜೊತೆಗೆ ಪ್ರತಿ ತಿಂಗಳು 6 ಲಕ್ಷಕ್ಕಿಂತ ಹೆಚ್ಚು ಲೀಟರ್ ಹಾಲು ನೀಡುವ ಹಚ್ಚ ಹಸಿರಾದ ಸಂಪತ್ಭರಿತ ಸಾವಿರಾರು ಎಕರೆ ಭೂಮಿಯನ್ನು ಟೌನ್ ಶಿಪ್ ಹೆಸರಿನಲ್ಲಿ ಸರ್ಕಾರ ಬಲವಂತದಿಂದ ರೈತರಿಂದ ಕಸಿದುಕೊಳ್ಳಲು ಹುನ್ನಾರ ನಡೆಸಿದೆ. ಇಂತಹ ಭೂಮಿಯಲ್ಲಿ ಟೌನ್ ಶಿಫ್ ಮಾಡುವುದು ಸರಿಯಲ್ಲ.

ಆದ್ದರಿಂದ ಕೂಡಲೇ ಸರ್ಕಾರ ಈ ಯೋಜನೆಯನ್ನು ರದ್ದುಗೊಳಿಸಬೇಕು ಹಾಗೂ ಭೂಸ್ವಾಧೀನ ವಿರೋಧಿಸುತ್ತಿರುವ ರೈತರ ಮೇಲೆ ಹಾಕಿರುವ ಎಲ್ಲ ಕೇಸುಗಳನ್ನು ತಕ್ಷಣ ಹಿಂಪಡೆಯಬೇಕು. ಸರ್ಕಾರ ತನ್ನ ಹಠಮಾರಿತನ ಕೈಬಿಡುವವರೆಗೂ ನಮ್ಮ ಹೋರಾಟ ನಿಲ್ಲದು.

ನ್ಯಾಯಯುತ ಹೋರಾಟ ನಡೆಸುತ್ತಿರುವ ಹೋರಾಟದಲ್ಲಿ ಕೇಸು ಹಾಕಿಸಿಕೊಂಡಿರುವ ರೈತರು ಧೃತಿಗೆಡಬೇಕಾಗಿಲ್ಲ.

ನಮ್ಮ ಕಾನೂನು ತಂಡ ಅವರಿಗೆ ಉಚಿತ ಕಾನೂನು ನೆರವು ನೀಡಲಾಗುತ್ತದೆ. ನಿಮ್ಮ ನ್ಯಾಯುತವಾದ ಹೋರಾಟವನ್ನು ಯಾವುದೇ ಕಾರಣಕ್ಕೂ ಬಿಡಬೇಡಿ. ಹೋರಾಟ ತಾರ್ಕಿಕ ಅಂತ್ಯ ಕಾಣುವ ತನಕ ನಾನು ನಿಮ್ಮ ಬೆಂಬಲಕ್ಕೆ ನಿಲ್ಲುವುದಾಗಿ ರೈತರಿಗೆ ಅಭಯ ನೀಡಿದ್ದಾರೆ.

# ಅಕ್ರಮ ಮರಳು ಸಾಗಾಟದ ಟ್ರ್ಯಾಕ್ಟರ್ ವಶ : ಚಾಲಕ ಪರಾರಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಯಂಕಂಚಿ ಗ್ರಾಮದ ಮಾರ್ಗವಾಗಿ ಸಿಂದಗಿಯೆಡೆಗೆ ಅಕ್ರಮವಾಗಿ ಸಾದಾ ಮರಳು ಸಾಗಾಟ ಮಾಡುತ್ತಿದ್ದ ನಂಬರಿಲ್ಲದ ಟ್ರ್ಯಾಕ್ಟರ್ ಹಾಗೂ ಟ್ರೇಲರ್‌ನ್ನು ಸಿಂದಗಿ ಪೊಲೀಸರು ದಾಳಿ ನಡೆಸಿ ವಶಪಡಿಸಿಕೊಂಡಿದ್ದು, ಚಾಲಕ ಸ್ಥಳದಿಂದ ಪರಾರಿಯಾಗಿರುವ ಘಟನೆ ಯಂಕಂಚಿ-ಸಿಂದಗಿ ರಸ್ತೆಯ ಸವಹಳ್ಳದ ಸಮೀಪ ನಡೆದಿದೆ.

ಖಚಿತ ಮಾಹಿತಿಯ ಮೇರೆಗೆ, ಮೇಲಾಧಿಕಾರಿಗಳ ಸೂಚನೆಯಂತೆ ಸಿಂದಗಿ ಪೊಲೀಸ್ ಠಾಣೆಯ ಪಿಎಸ್ಐ ಶ್ರೀಕಾಂತ ಕಾಂಬಳೆ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿಗಳಾದ ಉಮೇಶ ನಂದಶೆಟ್ಟಿ, ವಾಯ್.ಕೆ.ಉಕಮನಾಳ ಕಾರ್ಯಾಚರಣೆ ನಡೆಸಿದರು. ಈ ವೇಳೆ ಯಂಕಂಚಿ ಮಾರ್ಗದಿಂದ ಬರುತ್ತಿದ್ದ ಕುಬೋಟಾ ಕಂಪನಿಯ ನಂಬರಿಲ್ಲದ ಟ್ರ್ಯಾಕ್ಟರ್‌ನ್ನು ತಡೆಹಿಡಿಯಲು ಪೊಲೀಸರು ಸೂಚನೆ ನೀಡಿದಾಗ, ಚಾಲಕ ಸ್ವಲ್ಪ ದೂರ ವಾಹನ ಚಲಾಯಿಸಿ ರಸ್ತೆ ಬದಿಯಲ್ಲಿ ನಿಲ್ಲಿಸಿ ಚಾಲಕ ಪರಾರಿಯಾಗಿದ್ದಾನೆ.

ಪಂಚರ ಸಮ್ಮುಖದಲ್ಲಿ ವಾಹನವನ್ನು ಪರಿಶೀಲಿಸಿದಾಗ ಟ್ರೇಲರ್‌ನಲ್ಲಿ ಅಂದಾಜು ಒಂದು ಬ್ರಾಸ್ ಸಾದಾ ಮರಳು ಯಾವುದೇ ಅಧಿಕೃತ ಅನುಮತಿ ಇಲ್ಲದೆ ಸಾಗಾಟ ಮಾಡುತ್ತಿರುವುದು ಬೆಳಕಿಗೆ ಬಂದಿದೆ. ಪೊಲೀಸರು ಟ್ರ್ಯಾಕ್ಟರ್ ಹಾಗೂ ಟ್ರೇಲರ್ ಸೇರಿ ಸುಮಾರು ರೂ.2 ಲಕ್ಷ ಮೌಲ್ಯದ ವಾಹನ ಹಾಗೂ ರೂ.4 ಸಾವಿರ ಮೌಲ್ಯದ ಮರಳನ್ನು ಜಪ್ತಿ ಮಾಡಿದ್ದಾರೆ.

ಸ್ಥಳದಲ್ಲಿದ್ದ ಸಾರ್ವಜನಿಕರನ್ನು ವಿಚಾರಿಸಿದರೂ ಟ್ರ್ಯಾಕ್ಟರ್‌ನ ಚಾಲಕ ಹಾಗೂ ಮಾಲೀಕರ ಗುರುತು ಪತ್ತೆಯಾಗಿಲ್ಲ. ಪರಾರಿಯಾಗಿರುವ ಚಾಲಕ ಹಾಗೂ ವಾಹನದ ಮಾಲೀಕರ ವಿರುದ್ಧ ಸಿಂದಗಿ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ 227/2026ರಡಿ ಬಿ.ಎನ್.ಎಸ್. 2023ರ ಕಲಂ 303(2) ಅನ್ವಯ ಪ್ರಕರಣ ದಾಖಲಿಸಿಕೊಂಡು, ಆರೋಪಿಗಳ ಪತ್ತೆಗೆ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ದ್ರಾಕ್ಷಿ ಬೆಳೆ ನೋಂದಣಿ ಅವಧಿ ಪರಿಷ್ಕರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ದ್ರಾಕ್ಷಿ ಬೆಳೆಗೆ ಸಂಬಂಧಿಸಿದ ನೋಂದಣಿಯ ಅಂತಿಮ ದಿನಾಂಕವನ್ನು ಪರಿಷ್ಕರಿಸಲಾಗಿದೆ. ಈ ಮೊದಲು ಸೆಪ್ಟೆಂಬರ್ 15 ಎಂದು ನಿಗದಿಪಡಿಸಲಾಗಿದ್ದ ನೋಂದಣಿಯ ಅಂತಿಮ ದಿನಾಂಕವನ್ನು ತಿದ್ದುಪಡಿ ಮಾಡಿ ಆಗಸ್ಟ್ 17 ಎಂದು ನಿಗದಿಪಡಿಸಲಾಗಿದೆ. ಉಳಿದಂತೆ ಸದರಿ ಸರ್ಕಾರಿ ಆದೇಶದಲ್ಲಿನ ಇತರೆ ಎಲ್ಲ ಷರತ್ತುಗಳು ಮತ್ತು ನಿಯಮಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ತೋಟಗಾರಿಕೆ ಇಲಾಖೆಯ ತಿಳಿಸಿದೆ.

## ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಜಿಲ್ಲಾ ಪ್ರವಾಸ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಜಗನ್ನಾಥ್ ಹಲಮಡಗಿ ಅವರು ಜುಲೈ 16 ಮತ್ತು 17 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಜುಲೈ 16 ರಂದು ಬೆಳಿಗ್ಗೆ 11 ಗಂಟೆಗೆ ನಗರದಲ್ಲಿರುವ ಆಸ್ಪತ್ರೆ, ಶಾಲೆ, ಪೊಲೀಸ್ ಠಾಣೆ, ವಸತಿ ನಿಲಯ, ಅಂಗನವಾಡಿ ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಲಿದ್ದಾರೆ. ನಂತರ ಸಂಜೆ 4 ಗಂಟೆಗೆ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಚರ್ಚೆ ನಡೆಸಲಿದ್ದಾರೆ.

ಜುಲೈ 17 ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ಜಿಲ್ಲೆಯ ವಿವಿಧ ಶಾಲೆ, ಆಸ್ಪತ್ರೆ, ಅಂಗನವಾಡಿ ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳ ಪರಿಶೀಲನೆ ನಡೆಸಿ, ನಂತರ ಬಾಗಲಕೋಟೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ತಿಳಿಸಿದೆ.

# ಕಬ್ಬು ಇಳುವರಿ ಹೆಚ್ಚಳಕ್ಕೆ ನೂತನ ತಾಂತ್ರಿಕತೆಗಳ ಅಳವಡಿಕೆ ಅಗತ್ಯ

## ವಿಜಯಪುರ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ ಸಲಹೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರ ಇಂಡಿ ಮತ್ತು ಕೆಪಿಆರ್ ಸಕ್ಕರೆ ಕಾರ್ಖಾನೆಯ ಸಹಯೋಗದೊಂದಿಗೆ ಕಬ್ಬಿನಲ್ಲಿ ನೂತನ ತಾಂತ್ರಿಕತೆಗಳ ಕಾರ್ಯಾಗಾರವನ್ನು ಆಲಮೇಲ ತಾಲ್ಲೂಕಿನ ಬಳಗಾನೂರ ಗ್ರಾಮದ ಮಲ್ಲಿಕಾರ್ಜುನ ದೇವಸ್ಥಾನದ ಮಠದ ಆವರಣದಲ್ಲಿ ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮದಲ್ಲಿ ಕಬ್ಬು ಬೆಳೆಯಲ್ಲಿ ಉತ್ಪಾದಕತೆ ಹೆಚ್ಚಿಸಲು ಹಾಗೂ ಉತ್ಪಾದನಾ ವೆಚ್ಚ ಕಡಿಮೆ ಮಾಡಲು ಅನುಸರಿಸಬಹುದಾದ ನೂತನ ತಾಂತ್ರಿಕತೆಗಳ ಕುರಿತು ರೈತರಿಗೆ ಸಮಗ್ರ ಮಾಹಿತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ಸಂಶೋಧನಾ ಕೇಂದ್ರ ಸಂಕೇಶ್ವರದ ವಿಜ್ಞಾನಿ ಡಾ. ಸುನೀಲ್ ಕುಮಾರ್ ನೂಲಿ ಅವರು ಉತ್ತಮ ತಳಿಗಳ ಆಯ್ಕೆ, ಬೀಜೋಪಚಾರ, ಮಣ್ಣು ಪರೀಕ್ಷೆ ಆಧಾರಿತ ಗೊಬ್ಬರ ನಿರ್ವಹಣೆ, ಸೂಕ್ಷ್ಮ ಪೋಷಕಾಂಶಗಳ ಬಳಕೆ, ನೀರಿನ ಸಮರ್ಪಕ ನಿರ್ವಹಣೆ, ಹನಿ ನೀರಾವರಿ ಪದ್ಧತಿ, ಕಳೆ ನಿರ್ವಹಣೆ, ಸಮಗ್ರ ಕೀಟ ಮತ್ತು ರೋಗ ನಿರ್ವಹಣೆ, ಯಾಂತ್ರೀಕೃತ ಕೃಷಿ ಹಾಗೂ ಕೊಯ್ಲಿನ ನಂತರದ ನಿರ್ವಹಣೆ ಕುರಿತು ವಿವರವಾಗಿ ತಿಳಿಸಿದರು.

ಅಲ್ಲದೆ, ಹವಾಮಾನ ಬದಲಾವಣೆಗೆ ಹೊಂದಿಕೊಳ್ಳುವ ಕೃಷಿ ಪದ್ಧತಿಗಳು, ಮಣ್ಣಿನ ಫಲವತ್ತತೆ ಕಾಪಾಡುವ ಕ್ರಮಗಳು ಹಾಗೂ ಸರ್ಕಾರಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳುವ ಕುರಿತು ರೈತರಿಗೆ ವಿಜಯಪುರ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರಾದ ಶಿವನಗೌಡ ಪಾಟೀಲ ಮಾಹಿತಿ ನೀಡಿದರು.

ಕೃಷಿ ಪಂಡಿತ ಶ್ರೀಮಂತ ಇಂಡಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕೃಷಿಕ ಸಮಾಜದ ತಾಲ್ಲೂಕು ಅಧ್ಯಕ್ಷ ಎನ್. ಎನ್. ಪಾಟೀಲ, ಇಂಡಿ ಉಪ ವಿಭಾಗದ ಉಪ ಕೃಷಿ ನಿರ್ದೇಶಕ ಚಂದ್ರಕಾಂತ ಪವಾರ್, ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕ ಎಸ್.ಜಿ. ರಾಧಾಕೃಷ್ಣ , ಸಿಂದಗಿ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಪ್ರಶಾಂತ ಸಾಣಿ, ಕೆ ಪಿ ಆರ್. ಸಕ್ಕರೆ ಕಾರ್ಖಾನೆಯ ಡಿಜಿಎಂ ಆದ ಟಿ ಬಿ ಪಾಟೀಲ್, ಕೃಷಿ ವಿಜ್ಞಾನ ಕೇಂದ್ರ ಇಂಡಿಯ ವಿಜ್ಞಾನಿಗಳಾದ ಡಾ. ಪ್ರೇಮ್ ಚಂದ್ ಮತ್ತು ಡಾ. ಪ್ರಕಾಶ್ ಮತ್ತು ರೈತ ಸಂಪರ್ಕ ಕೇಂದ್ರದ ಆಲಮೇಲದ ಅಧಿಕಾರಿಗಳು, ರೈತ ಅನುವುಗಾರರು, ಕೃಷಿ ಸಖಿಯವರು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR